**ಕರ್ನಾಟಕ ಲೋಕ ಸೇವಾ ಆಯೋಗ,**

**"ಉದ್ಯೋಗ ಸೌಧ ಬೆಂಗಳೂರು-560001"**

ಸಂಖ್ಯೆ:ಪಿಎಸ್ ಸಿ 77 ಆರ್ ಟಿ ಬಿ(2)/2024-25/454 ದಿನಾಂಕ: 28-05-2024

**ತಿದ್ದುಪಡಿ ಅಧಿಸೂಚನೆ**

ಆಯೋಗವು ದಿ:15-03-2024 ರಂದು ಪದವಿಮಟ್ಟಕ್ಕಿಂತ ಕಡಿಮೆ ವಿದ್ಯಾರ್ಹತೆಯನ್ನು ಹೊಂದಿರುವ ಹಾಗೂ ಪದವಿ ಮಟ್ಟದ ವಿದ್ಯಾರ್ಹತೆಯನ್ನು ಹೊಂದಿರುವ ವಿವಿಧ ಇಲಾಖೆಗಳಲ್ಲಿನ ವಿವಿಧ ಗ್ರೂಪ್ 'ಸಿ' - 373 + 113 (ಹೈಕ) ಹುದ್ದೆಗಳನ್ನು ಪ್ರತ್ಯೇಕವಾಗಿ ಅಧಿಸೂಚಿಸಿ ಆನ್‌ಲೈನ್ ಮೂಲಕ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಸದರಿ ಅಧಿಸೂಚನೆಗಳಲ್ಲಿನ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಸಹಾಯಕ ಗ್ರಂಥಪಾಲಕ 13 + 08(ಹೈಕ) ಮತ್ತು ಗ್ರಂಥಪಾಲಕ 10 + 03(ಹೈಕ) ಹುದ್ದೆಗಳಿಗೆ ಇಲಾಖೆಯ ಪ್ರಸ್ತಾವನೆಯಂತೆ ವಿದ್ಯಾರ್ಹತೆಯನ್ನು ನಿಗದಿಪಡಿಸಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿತ್ತು. ಪ್ರಸ್ತುತ ಇಲಾಖೆಯಿಂದ ಸದರಿ ಹುದ್ದೆಗಳಿಗೆ ಈ ಕೆಳಗೆ ವಿವರಿಸಿರುವ ವಿದ್ಯಾರ್ಹತೆಯನ್ನು ಪರಿಗಣಿಸಿ ಅರ್ಜಿ ಸಲ್ಲಿಸಲು ಅವಕಾಶ ನೀಡುವಂತೆ ಸ್ಪಷ್ಟೀಕರಣ ನೀಡಲಾಗಿರುತ್ತದೆ.

| ಕ್ರ. ಸಂ. | ಇಲಾಖೆಯ ಹೆಸರು, ಹುದ್ದೆಯ ಪದನಾಮ ಮತ್ತು ಹುದ್ದೆಗಳ ಸಂಖ್ಯೆ | ಈ ಹಿಂದೆ ನಿಗದಿಪಡಿಸಲಾದ ವಿದ್ಯಾರ್ಹತೆ | ಪ್ರಸ್ತುತ ಇಲಾಖೆಯ ಸ್ಪಷ್ಟೀಕರಣದನ್ವಯ ನಿಗದಿಪಡಿಸಲಾದ ವಿದ್ಯಾರ್ಹತೆ |
|---|---|---|---|
| 1 | ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿನ ಸಹಾಯಕ ಗ್ರಂಥಪಾಲಕ 13 + 08(ಹೈಕ) | Must be a holder of a Diploma in Library Science by the Board of Technical Education | Diploma in Library Science or Diploma in Library and Information Science by the Board of Technical Education |
| 2 | ಗ್ರಂಥಪಾಲಕ 10+03(ಹೈಕ) | Must be holder of degree in Library Science of an University established by law in India | Bachelor of Library Science or Bachelor of Library and Information Science (BLISc) of an University established by law in India<br>Or<br>Master of Library Science or Master of Library and Information Science (MLISc) of an University established by law in India. |

ಈ ಹಿನ್ನೆಲೆಯಲ್ಲಿ ಮೇಲ್ಕಂಡ ತಃಖ್ತೆಯಲ್ಲಿ ವಿವರಿಸಿರುವ ಹುದ್ದೆಗಳಿಗೆ ಇಲಾಖೆಯು ನೀಡಿರುವ ವಿದ್ಯಾರ್ಹತೆಯನ್ನು ಪರಿಗಣಿಸಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಹಾಗೂ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಸಾಕಷ್ಟು ಕಾಲಾವಕಾಶ ನೀಡುವ ದೃಷ್ಟಿಯಿಂದ ಮೇಲ್ಕಂಡ ಅಧಿಸೂಚನೆಯಲ್ಲಿನ ವಿವಿಧ ಇಲಾಖೆಗಳ ಎಲ್ಲಾ ಗ್ರೂಪ್ ಸಿ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವನ್ನು 10-06-2024ರವರೆಗೆ ವಿಸ್ತರಿಸಲಾಗಿದೆ. ಉಳಿದಂತೆ ದಿನಾಂಕ:15-03-2024ರ ಅಧಿಸೂಚನೆಗಳಲ್ಲಿನ ಇತರೆ ಷರತ್ತು/ಸೂಚನೆಗಳಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ಸಹಿ/-
(ಡಾ. ರಾಕೇಶ್ ಕುಮಾರ್ .ಕೆ)
ಕಾರ್ಯದರ್ಶಿ
ಕರ್ನಾಟಕ ಲೋಕ ಸೇವಾ ಆಯೋಗ

## ಕರ್ನಾಟಕ ಲೋಕಸೇವಾ ಆಯೋಗ, " ಉದ್ಯೋಗ ಸೌಧ ",ಬೆಂಗಳೂರು -560001

ಸಂಖ್ಯೆ: ಪಿಎಸ್ ಸಿ 506 ಆರ್ ಟಿಬಿ(2) /2023-24/3497 ದಿನಾಂಕ: 15-03-2024

### ಅಧಿಸೂಚನೆ

1. ಆಯೋಗವು ಕಾಲ ಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ನಾಗರೀಕ ಸೇವೆಗಳು (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ಹಾಗೂ ತಿದ್ದುಪಡಿ ನಿಯಮ 2022 ರನ್ವಯ **ಉಳಿಕೆ ಮೂಲ ವೃಂದದಲ್ಲಿನ ಕೆಳಕಂಡ ಗ್ರೂಪ್ 'ಸಿ' ಹುದ್ದೆಗಳನ್ನು** ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ On-line ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ.

| ಕ್ರ. ಸಂ. | ಇಲಾಖೆಯ ಹೆಸರು | ಹುದ್ದೆಯ ಪದನಾಮ | ಹುದ್ದೆಗಳ ಸಂಖ್ಯೆ |
|---|---|---|---|
| ಉಳಿಕೆ ಮೂಲ ವೃಂದ ಗ್ರೂಪ 'ಸಿ' ಹುದ್ದೆಗಳು | | | |
| 1 | ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ | ಕೈಗಾರಿಕಾ ವಿಸ್ತಾರಣಾಧಿಕಾರಿ | 50 |
| 2 | ಸಾರ್ವಜನಿಕ ಗ್ರಂಥಾಲಯ ಇಲಾಖೆ | ಗ್ರಂಥಪಾಲಕ | 10 |

2. **ಆಯ್ಕೆ ಪ್ರಕ್ರಿಯೆಗೆ ನಿಗದಿಪಡಿಸಿರುವ ಕಾಲಮಿತಿ:**

| | |
|---|---|
| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಪ್ರಾರಂಭಿಕ ದಿನಾಂಕ | 29-04-2024 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 28-05-2024 |
| ಶುಲ್ಕ ಪಾವತಿಗೆ ಕೊನೆಯ ದಿನಾಂಕ | 28-05-2024 |

**ವಿಶೇಷಸೂಚನೆ:–**

1. ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮೊದಲು ಎಲ್ಲಾ ವಿವರಗಳನ್ನು ಓದಿ ಅರ್ಥೈಸಿಕೊಂಡು ಆನಂತರವೇ ತಮಗೆ ಅನ್ವಯವಾಗುವ ವಿವರಗಳನ್ನು ಭರ್ತಿ ಮಾಡತಕ್ಕದ್ದು.
2. ಒಮ್ಮೆಅರ್ಜಿಸಲ್ಲಿಸಿದ ನಂತರ ಅರ್ಜಿಯಲ್ಲಿ ಮೀಸಲಾತಿ ಸೇರಿದಂತೆ ಯಾವುದೇ ವಿವರಗಳನ್ನು ತಿದ್ದುಪಡಿ / ಸೇರ್ಪಡೆ ಮಾಡುವಂತೆ ನೀಡುವ ಯಾವುದೇ ಮನವಿ/ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.
3. ನಿಯಮಾನುಸಾರ ಆನ್ಲೈನ್ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದರಿಂದ ಅಭ್ಯರ್ಥಿಗಳು ವಯೋಮಿತಿ, ವಿದ್ಯಾರ್ಹತೆಗೆ ಸಂಬಂಧಿಸಿದ ಪ್ರಮಾಣಪತ್ರಗಳನ್ನು ಹಾಗೂ ಅರ್ಜಿಯಲ್ಲಿ ಕೋರಿರುವ ಎಲ್ಲಾ ಮೀಸಲಾತಿ ಪ್ರಮಾಣಪತ್ರ/ ಇತರೆ ಪ್ರಮಾಣಪತ್ರಗಳನ್ನು ತಮ್ಮ ಹೆಸರಿನಲ್ಲಿಯೇ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಅಧಿಸೂಚನೆಯ ಅನುಬಂಧದಲ್ಲಿ ಸೂಚಿಸಿರುವ ನಮೂನೆಗಳಲ್ಲಿಯೇ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಸದರಿ ದಾಖಲೆಗಳನ್ನು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು, (ದಾಖಲೆಗಳು ಸ್ಪಷ್ಟವಾಗಿರುಬೇಕು) ತಪ್ಪಿದ್ದಲ್ಲಿ ಅವರ ಮೀಸಲಾತಿ/ಅಭ್ಯರ್ಥಿತ್ವವನ್ನು ತಿರಸ್ಕರಿಸಲಾಗುವುದು.

4. ಅಭ್ಯರ್ಥಿಗಳು ಒಮ್ಮೆ ಅರ್ಜಿ ಸಲ್ಲಿಸಿದ ನಂತರ ಯಾವುದೇ ಕಾರಣಕ್ಕೂ ಹೆಸರು, ಜನ್ಮ ದಿನಾಂಕ, ವಿಳಾಸ ಬದಲಾವಣೆ, ಮೀಸಲಾತಿ, ವಿದ್ಯಾರ್ಹತೆ ಮುಂತಾದ ವಿವರಗಳನ್ನು ತಿದ್ದುಪಡಿ ಮಾಡುವಂತೆ ಸಲ್ಲಿಸುವ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ. ಆದರೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಈಗಾಗಲೇ ಸಲ್ಲಿಸಿರುವ ಅರ್ಜಿಯನ್ನು ಸ್ವಯಂ Delete ಮಾಡಿ ಹೊಸದಾಗಿ ಮತ್ತೊಂದು ಅರ್ಜಿಯನ್ನು ಸಲ್ಲಿಸಬಹುದಾಗಿದೆ. Delete ಮಾಡಿದ ಅರ್ಜಿಗೆ ಕಟ್ಟಿರುವ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಇತರೆ ಯಾವುದೇ ಹುದ್ದೆಗಳಿಗೆ ಸರಿದೂಗಿಸಲಾಗುವುದಿಲ್ಲ.

2.1 <u>ಅರ್ಜಿಗಳನ್ನು Online ಮೂಲಕವೇ ಭರ್ತಿ ಮಾಡಿ , ಭಾವಚಿತ್ರ/ಸಹಿ /ವಯೋಮಿತಿ/ ವಿದ್ಯಾರ್ಹತೆ ಹಾಗೂ ಕೋರಿದ ಮೀಸಲಾತಿಗೆ ಸಂಬಂಧಿಸಿದ ಎಲ್ಲಾ ದಾಖಲೆಗಳನ್ನು ಅಪ್ಲೋಡ್ ಮಾಡಿದ ನಂತರ ಶುಲ್ಕವನ್ನು ನೆಟ್ ಬ್ಯಾಂಕಿಂಗ್ / ಡೆಬಿಟ್ ಕಾರ್ಡ್/ ಕ್ರೆಡಿಟ್ ಕಾರ್ಡ್ /UPI ಮೂಲಕ ಸಂದಾಯ ಮಾಡಬಹುದಾಗಿರುತ್ತದೆ. ಶುಲ್ಕವನ್ನು ಪಾವತಿಸದ ಹಾಗೂ ದಾಖಲೆಗಳನ್ನು/ ಭಾವಚಿತ್ರ/ ಸಹಿಯನ್ನು ಅಪ್ಲೋಡ್ ಮಾಡದೇ ಇರುವ /ಅಸ್ಪಷ್ಟ ದಾಖಲೆಗಳನ್ನು ಅಪ್ಲೋಡ್ ಮಾಡಿರುವ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.</u>

## 3) ಅರ್ಜಿ ಸಲ್ಲಿಸುವ ಹಂತಗಳು/ ಅರ್ಜಿ ಸಲ್ಲಿಸುವ ಪ್ರಕ್ರಿಯೆ

ಆನ್‌ಲೈನ್‌ನಲ್ಲಿ ಅರ್ಜಿಭರ್ತಿಮಾಡಿ ಸಲ್ಲಿಸಿದ ಮಾತ್ರಕ್ಕೆ ಅಭ್ಯರ್ಥಿಗಳು ಅಧಿಸೂಚನೆಯಲ್ಲಿನ ಎಲ್ಲಾ ಷರತ್ತುಗಳನ್ನು ಪೂರೈಸಿರುತ್ತಾರೆ ಎಂದಲ್ಲ. ತದನಂತರದಲ್ಲಿ ಅರ್ಜಿಗಳನ್ನು ಪರಿಶೀಲನೆಗೆ ಒಳಪಡಿಸಲಾಗುವುದು ಹಾಗೂ ಯಾವುದೇ ಹಂತದಲ್ಲಿ ನ್ಯೂನತೆಗಳು ಕಂಡುಬಂದಲ್ಲಿ ಅಂತಹ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಈ ಅರ್ಜಿಸಲ್ಲಿಸುವ ಪ್ರಕ್ರಿಯೆಯು ಒಂದುಬಾರಿಯ ನೋಂದಣಿ ಪ್ರಕ್ರಿಯೆಯನ್ನು ಒಳಗೊಂಡಿದ್ದು, (OTR-ONE TIME REGISTRATION) ಅಭ್ಯರ್ಥಿಗಳು ನೀಡಿರುವಮಾಹಿತಿಯನ್ನು ಮುಂದಿನ ಎಲ್ಲಾ ಅಧಿಸೂಚನೆಗಳಿಗೂ ಪರಿಗಣಿಸಲಾಗುವುದರಿಂದ, ಅಭ್ಯರ್ಥಿಗಳು Profile Creation / ರುಜುವಾತುಗಳು ಸೃಷ್ಟಿಸುವ ಹಂತದಲ್ಲಿ ಅತೀ ಜಾಗರೂಕತೆಯಿಂದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಬೇಕಾಗಿದೆ. ಅಭ್ಯರ್ಥಿಗಳು ಸೂಚನೆಗಳನ್ನು ಹಂತಹಂತವಾಗಿ ಓದಿಕೊಳ್ಳತಕ್ಕದ್ದು, ಈ ಕೆಳಕಂಡ ಸೂಚನೆಗಳನ್ನು ಓದಿದನಂತರವೇ ಅರ್ಜಿಯನ್ನು ಭರ್ತಿಮಾಡತಕ್ಕದ್ದು.

1. "ವೈಯಕ್ತಿಕ ವಿವರದಲ್ಲಿ" SSLC ಯನ್ನು2002 ಅಥವಾ ಅದಕ್ಕಿಂತ ಹಿಂದೆ ಅಧ್ಯಯನ ಮಾಡಿದ ಅಭ್ಯರ್ಥಿಗಳು ವಿವರಗಳನ್ನು ಸ್ವತ: [Manual Entry] ನಮೂದು ಮಾಡಬೇಕಾಗಿರುತ್ತದೆ. 2003 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು SSLC ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತವೆ.
2. "ವೈಯಕ್ತಿಕ ವಿವರದಲ್ಲಿ" CBSE ಯನ್ನು 2003 ಅಥವಾ ಅದಕ್ಕಿಂತ ಹಿಂದೆ ಅಧ್ಯಯನ ಮಾಡಿದ ಅಭ್ಯರ್ಥಿಗಳು ವಿವರಗಳನ್ನು ಸ್ವತ: [Manual Entry] ನಮೂದು ಮಾಡಬೇಕಾಗಿರುತ್ತದೆ. 2004 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು CBSE ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತವೆ.
3. "ವಿದ್ಯಾರ್ಹತೆಯ ವಿವರದಲ್ಲಿ" PUC ತರಗತಿಯನ್ನು 2007 ಅಥವಾ ಅದಕ್ಕಿಂತ ಹಿಂದೆ ಅಭ್ಯಸಿಸಿದ್ದಲ್ಲಿ ಅಥವಾ ಯಾವುದೇ ಡಾಟಾ ಬಾರದೇ ಇದ್ದಲ್ಲಿ ಸ್ವತಃ ವಿವರಗಳನ್ನು ನಮೂದಿಸುವುದು
4. PUC ತರಗತಿಯನ್ನು 2008 ಮತ್ತು ನಂತರದಲ್ಲಿ ಅಧ್ಯಯನ ಮಾಡಿದ ಅಭ್ಯರ್ಥಿಗಳು PUC ನೋಂದಣಿ ಸಂಖ್ಯೆಯನ್ನು ನಮೂದಿಸಿದಲ್ಲಿ ವಿವರಗಳು ಸ್ವಯಂಚಾಲಿತವಾಗಿ ಅಧ್ಯಯನ ಮಾಡಿದ ಬೋರ್ಡಿನಿಂದ ನೇರವಾಗಿ ದಾಖಲಾಗುತ್ತವೆ.
5. "ಗುರುತಿನಪುರಾವೆ /ವಿವರದಲ್ಲಿ" Adhar / Kutumba ID /Ration Card / UDID ಸಂಖ್ಯೆಗಳನ್ನು ನಮೂದಿಸಿದಲ್ಲಿ ನಿಮ್ಮ ಖಾಯಂ ವಿಳಾಸದ ಮಾಹಿತಿಯನ್ನು ಸ್ವಯಂಚಾಲಿತವಾಗಿ ಪಡೆಯಲಾಗುವುದು.

"ಮೀಸಲಾತಿ ವಿವರದಲ್ಲಿ" ನೀವು ಮೀಸಲಾತಿಯನ್ನು ಪಡೆಯಲು ಇಚ್ಛಿಸಿದಲ್ಲಿ ನಿಮ್ಮ ಜಾತಿ ಮೀಸಲಾತಿ / HK ಮೀಸಲಾತಿ ಪ್ರಮಾಣ ಪತ್ರದ RD ಸಂಖ್ಯೆಯನ್ನು ನಮೂದಿಸಿದಲ್ಲಿ API ಮೂಲಕ ವಿವರಗಳನ್ನು ಸ್ವಯಂಚಾಲಿತವಾಗಿ ಪಡೆಯಲಾಗುವುದು ಅಥವಾ ಸ್ವತ: ಅಭ್ಯರ್ಥಿಗಳು [Manual Entry ] ವಿವರಗಳನ್ನು ದಾಖಲಿಸಲು ಅವಕಾಶ ನೀಡಲಾಗಿರುತ್ತದೆ.

1. ಅಭ್ಯರ್ಥಿಗಳು KPSC ವೆಬ್‌ಸೈಟ್ ಮೂಲಕ ಮಾತ್ರ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು, ಇದರ ಹೊರತಾಗಿ ಯಾವುದೇ ಇತರ ಮೂಲಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.
2. ಹೊಸದಾಗಿ ನೋಂದಣಿ ಪ್ರಕ್ರಿಯೆಯನ್ನು ಪ್ರಾರಂಭಿಸಲು, ಅರ್ಜಿದಾರರು https://kpsconline.karnataka.gov.in ಗೆ ಭೇಟಿ ನೀಡಬೇಕು ಮತ್ತು ತಮ್ಮನ್ನು ನೋಂದಾಯಿಸಿಕೊಳ್ಳಲು "ಹೊಸ ಅರ್ಜಿದಾರರ ನೋಂದಣಿ" (New Registration) ಲಿಂಕ್ ಅನ್ನು ಕ್ಲಿಕ್ ಮಾಡಬೇಕು.
3. ನೋಂದಣಿ ಮತ್ತು ಲಾಗಿನ್ ರುಜುವಾತುಗಳನ್ನು ರಚಿಸಲು ನೀವು ಮಾನ್ಯವಾದ ಇಮೇಲ್ ಐಡಿ ಮತ್ತು ಮೊಬೈಲ್ ಸಂಖ್ಯೆಯನ್ನು ಹೊಂದಿರುವುದನ್ನು ಎಂದು ಖಚಿತ ಪಡಿಸಿಕೊಳ್ಳುವುದು.
4. ಒಮ್ಮೆ ನೋಂದಾಯಿಸಿ ಮತ್ತು ಲಾಗಿನ್ ರುಜುವಾತುಗಳನ್ನು (USER ID AND PASSWORD) ಪಡೆದ ನಂತರ, "ಅರ್ಜಿದಾರರ ವಿವರಗಳ ನೋಂದಣಿ" (APPLICANT DETAIL REGISTRATION) ಕ್ಲಿಕ್ ಮಾಡುವ ಮೂಲಕ ತಮ್ಮ ಸಂಪೂರ್ಣ ಮಾಹಿತಿಯನ್ನು ಭರ್ತಿ ಮಾಡಲು ಮುಂದುವರೆಯುವುದು.
5. ಅಭ್ಯರ್ಥಿಗಳು ತಮ್ಮ ವಿವರಗಳನ್ನು ಒಮ್ಮೆ ಮಾತ್ರ ಭರ್ತಿ ಮಾಡಬೇಕಾಗುತ್ತದೆ ಮತ್ತು ಈ ವಿವರಗಳನ್ನು ಆಯೋಗದ ಎಲ್ಲಾ ಭವಿಷ್ಯದ ಅಧಿಸೂಚನೆಗಳಿಗೆ ಬಳಸಲಾಗುತ್ತದೆ. ಅದ್ದರಿಂದ ನಿಮ್ಮ USER ID ಮತ್ತು Password ಗಳನ್ನು ಜೋಪಾನವಾಗಿ ಕಾಯ್ದಿಟ್ಟುಕೊಳ್ಳುವುದು. ತಮ್ಮ ಲಾಗಿನ್ ನಲ್ಲಿ ಮಾತ್ರ ಮಾಹಿತಿಯನ್ನು ನವೀಕರಿಸಬಹುದು.
6. ತಮ್ಮ ಅರ್ಜಿದಾರರ ವಿವರ ಪುಟದಲ್ಲಿ ಅಗತ್ಯವಿರುವ ಎಲ್ಲಾ ಮಾಹಿತಿಯನ್ನು ಎಚ್ಚರಿಕೆಯಿಂದ ಒದಗಿಸುವುದು ಮತ್ತು "ಉಳಿಸು" (SAVE) ಬಟನ್ ಅನ್ನು ಬಳಸಿಕೊಂಡು ಅದನ್ನು ಉಳಿಸಿರುವುದನ್ನು ಖಚಿತಪಡಿಸಿಕೊಳ್ಳುವುದು.
7. ತಾವು ಇತ್ತೀಚಿನ ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ ಮತ್ತು ಸಹಿ ಅಪ್‌ಲೋಡ್ ಮಾಡಬೇಕಾಗುತ್ತದೆ. ಭಾವಚಿತ್ರವು 200 KB ಮೀರಬಾರದು ಮತ್ತು ಸಹಿ 70 KB ಒಳಗೆ ಇರಬೇಕು.

   **ಗಮನಿಸಿ:** ಸಹಿಯನ್ನು ಮತ್ತು ಭಾವ ಚಿತ್ರವನ್ನು ಕೇವಲ JPEG/JPGಸ್ವರೂಪದಲ್ಲಿ ಅಪ್‌ಲೋಡ್ ಮಾಡಬೇಕು.

   **ವಿಶೇಷ ಸೂಚನೆ:** ನೀವು ಒಂದು ಬಾರಿ ನೋಂದಣಿ ಪ್ರಕ್ರಿಯೆಯನ್ನು (OTR - ONE TIME REGISTRATON) ಪೂರ್ಣಗೊಳಿಸಿದ ಮಾತ್ರಕ್ಕೆ ಮೇಲೆ ತಿಳಿಸಲಾದ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲಾಗಿದೆ ಎಂದು ಭಾವಿಸತಕ್ಕದ್ದಲ್ಲ. ನಿಮ್ಮ ರುಜುವಾತುಗಳೊಂದಿಗೆ ಲಾಗಿನ್ ಮಾಡಿದ ನಂತರ ಅರ್ಜಿಯನ್ನು ಸಲ್ಲಿಸಲು "Apply to Post" Tab ಅನ್ನು ಕ್ಲಿಕ್ ಮಾಡಿ ಅರ್ಜಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿರುತ್ತದೆ.
8. ತಮ್ಮ ರುಜುವಾತುಗಳೊಂದಿಗೆ (USER ID AND PASSWORD) ಲಾಗಿನ ಮಾಡಿದ ನಂತರ, " Apply to Post" ಅಡಿಯಲ್ಲಿ ತಾವು ಸಕ್ರಿಯ ಅಧಿಸೂಚನೆಗಳನ್ನು ನೋಡಬಹುದು. ಹಾಗೂ ಅರ್ಜಿ ಸಲ್ಲಿಸಲು ಬಯಸುವ ಅಧಿಸೂಚನೆಯ ಪಕ್ಕದಲ್ಲಿರುವ" Apply Post " ಲಿಂಕ್ ಅನ್ನು ಕ್ಲಿಕ್ ಮಾಡುವುದು.
9. "Apply Post" ಲಿಂಕ್ ಅನ್ನು ಕ್ಲಿಕ್ ಮಾಡುವುದರಿಂದ ತಾವು ಅಧಿಸೂಚನೆಯ ಪ್ರಕಾರ ಅರ್ಹತಾ ಮಾನದಂಡಗಳನ್ನು ಪೂರೈಸಿದ್ದೀರಾ ಎಂದು ತಂತ್ರಾಂಶವು ಪರಿಶೀಲಿಸುತ್ತದೆ. ಹಾಗೂ ಅನರ್ಹರಾಗಿದ್ದರೆ, ಸಿಸ್ಟಮ್ ಸೂಕ್ತವಾದ ಸಂದೇಶವನ್ನು ಪ್ರದರ್ಶಿಸುತ್ತದೆ.
10. ಅರ್ಹತಾ ಷರತ್ತುಗಳನ್ನು ಪೂರೈಸಿರುವ ಅಭ್ಯರ್ಥಿಗಳಿಗೆ ಮಾತ್ರ ಅವರ ಅರ್ಜಿಯನ್ನು ಮುಂದುವರಿಸಲು ತಂತ್ರಾಂಶವು ಅನುಮತಿಸುತ್ತದೆ.
11. ಅರ್ಜಿಯ ಅಂತಿಮ ಸಲ್ಲಿಕೆಗೆ ಮೊದಲು, ಅರ್ಜಿಯಲ್ಲಿನ ಎಲ್ಲಾ ಸಂಬಂಧಿತ ಕ್ಷೇತ್ರಗಳನ್ನು ಸರಿಯಾಗಿ ಭರ್ತಿ ಮಾಡಲಾಗಿದೆಯೇ ಎಂದು ಖಚಿತಪಡಿಸಿಕೊಳ್ಳುವುದು. ಏಕೆಂದರೆ ನಿರ್ದಿಷ್ಟ ಹುದ್ದೆಗೆ ಅರ್ಜಿ ಸಲ್ಲಿಸಿದ ನಂತರ ಬದಲಾವಣೆಗೆ ಅವಕಾಶವಿರುವುದಿಲ್ಲ.

12. ನಿರ್ದಿಷ್ಟ ಅಧಿಸೂಚನೆಗಾಗಿ ಅರ್ಜಿ ಶುಲ್ಕವನ್ನು ಪಾವತಿಸಲು ವಿಫಲವಾದರೆ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುತ್ತದೆ. SC/ST/CAT-1/ ದೈಹಿಕ ಅಂಗವಿಕಲ (PH) ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸುವುದರಿಂದ ವಿನಾಯಿತಿ ನೀಡಲಾಗಿದೆ.
13. ಈ ಕೆಳಗಿನ ವಿಧಾನಗಳನ್ನು ಬಳಸಿಕೊಂಡು ಪರೀಕ್ಷಾ ಶುಲ್ಕವನ್ನು ಪಾವತಿಸಬಹುದು:
    - ನೆಟ್ ಬ್ಯಾಂಕಿಂಗ್
    - ಡೆಬಿಟ್ ಕಾರ್ಡ್
    - ಕ್ರೆಡಿಟ್ ಕಾರ್ಡ್
    - UPI
14. ಶುಲ್ಕವನ್ನು ಪಾವತಿಸಲು ಕೆಳಗಿನ ವಿಧಾನವನ್ನು ಅನುಸರಿಸಿ:
    - ಹಂತ 1: ತಾವು ಅರ್ಜಿ ಸಲ್ಲಿಸಲು ಬಯಸುವ ನಿರ್ದಿಷ್ಟ ಅಧಿಸೂಚನೆಗಾಗಿ" APPLY Post" ಲಿಂಕ್ ಅನ್ನು ಕ್ಲಿಕ್ ಮಾಡುವುದು.
    - ಹಂತ 2: ಆಯ್ಕೆ ಮಾಡಿದ ಅಧಿಸೂಚನೆಗಾಗಿ ಅಪ್ಲಿಕೇಶನ್ ಅನ್ನು ಪರಿಶೀಲಿಸುವುದು.
    - ಹಂತ 3: "Pay Now" ಬಟನ್ ಅನ್ನು ಕ್ಲಿಕ್ ಮಾಡಿದಲ್ಲಿ, ಅದು ತಮ್ಮನ್ನು ಪಾವತಿ ಪರದೆಗೆ ಮರು ನಿರ್ದೇಶಿಸುತ್ತದೆ. ಅಲ್ಲಿ, ತಾವು UPI, ಕ್ರೆಡಿಟ್ ಕಾರ್ಡ್, ಡೆಬಿಟ್ ಕಾರ್ಡ್ ಅಥವಾ ನೆಟ್ ಬ್ಯಾಂಕಿಂಗ್ ಮೂಲಕ ಪಾವತಿಸಲು ಆಯ್ಕೆ ಮಾಡಬಹುದು.
    - ಹಂತ 4: ಪಾವತಿ ಯಶಸ್ವಿಯಾದಲ್ಲಿ, ಪಾವತಿಯ ಯಶಸ್ಸನ್ನು ದೃಢೀಕರಿಸುವ ಮೂಲಕ ತಮ್ಮನ್ನುಅರ್ಜಿ ಹಾಕಲು ಮರು ನಿರ್ದೇಶಿಸುತ್ತದೆ.
    - ಹಂತ 5: ತಾವು" Applied Post " ಗ್ರಿಡ್‌ನಿಂದ ಅಪ್ಲಿಕೇಶನ್ (Application copy) ಡೌನ್‌ಲೋಡ್ ಮಾಡಬಹುದು.
    - ಹಂತ 6: ಪಾವತಿ ವಹಿವಾಟು ವಿಫಲವಾದಲ್ಲಿ, Applied Post ವಿಭಾಗದಲ್ಲಿ "Re-Pay" ಲಿಂಕ್ ಅನ್ನು ಕ್ಲಿಕ್ ಮಾಡುವುದು ಮತ್ತು ಹಂತ 3 ಅನ್ನು ಪುನರಾವರ್ತಿಸುವುದು.

15. ಆಯೋಗದ ಅಧಿಸೂಚನೆಗೆ ಯಶಸ್ವಿಯಾಗಿ ಅರ್ಜಿ ಸಲ್ಲಿಸಿದ ನಂತರ ಆಯೋಗವು ಪರೀಕ್ಷೆಯನ್ನು ನಿಗದಿಪಡಿಸಿದಾಗ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳಲು ತಮಗೆ ಸೂಚನೆಯನ್ನು ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಲಾಗುವುದು.

ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ತೊಂದರೆಗಳು ಎದುರಾದಲ್ಲಿ ಈ ಕೆಳಕಂಡ ಹೆಲ್ಪ್‌ಲೈನ್ ನಂಬರ್ ಅನ್ನು ಸಂಪರ್ಕಿಸಲು ಸೂಚಿಸಿದೆ.

HELP LINE NO:080-30574957 / 30574901

3.1 ನೇಮಕಾತಿ ಪ್ರಾಧಿಕಾರವು ದೃಢೀಕರಿಸಿ ನೀಡಿರುವ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದ ಅಂಕಣದಲ್ಲಿ ಉಪಯೋಗಿಸಿದ ಪದಗಳ ಅರ್ಥವನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳಬೇಕು:-

| | | | |
|---|---|---|---|
| ಸಾ.ಅ | ಸಾಮಾನ್ಯ ಅರ್ಹತೆ | GM | General Merit |
| ಪ.ಜಾ | ಪರಿಶಿಷ್ಟ ಜಾತಿ | SC | Scheduled Caste |
| ಪ.ಪಂ | ಪರಿಶಿಷ್ಟ ಪಂಗಡ | ST | Scheduled Tribe |
| ಪ್ರ.-1 | ಪ್ರವರ್ಗ-1 | Cat–1 | Category – I |
| 2ಎ | ಪ್ರವರ್ಗ-2ಎ | 2A | Category – 2A |
| 2ಬಿ | ಪ್ರವರ್ಗ-2ಬಿ | 2B | Category – 2B |
| 3ಎ | ಪ್ರವರ್ಗ-3ಎ | 3A | Category – 3A |
| 3ಬಿ | ಪ್ರವರ್ಗ-3ಬಿ | 3B | Category – 3B |
| ಮಾ.ಸೈ | ಮಾಜಿ ಸೈನಿಕ | Ex-MP | Ex-Military Person |
| ಗ್ರಾಮೀಣ | ಗ್ರಾಮೀಣ ಅಭ್ಯರ್ಥಿ | Rural | Rural Candidate |
| ಕ.ಮಾ.ಅ | ಕನ್ನಡ ಮಾಧ್ಯಮ ಅಭ್ಯರ್ಥಿ | KMS | Kannada Medium Student |
| ಅಂ.ವಿ. | ಅಂಗವಿಕಲ ಅಭ್ಯರ್ಥಿ | PH | Physically Handicapped |
| ಯೋ.ನಿ.ಅ | ಯೋಜನೆ ನಿರಾಶ್ರಿತ ಅಭ್ಯರ್ಥಿ | PDP | Project Displaced Person |
| ಉ.ಮೂ.ವೃ | ಉಳಿಕೆ ಮೂಲ ವೃಂದ | RPC | Residual Parent Cadre |
| ಹೈಕ | ಹೈದ್ರಾಬಾದ್-ಕರ್ನಾಟಕ | HK | Hyderabad Karnataka |
| ತೃ.ಲಿ | ತೃತೀಯ ಲಿಂಗ | TG | Transgender |

3.2 ಶುಲ್ಕ:-

| | |
|---|---|
| ಸಾಮಾನ್ಯ ಅರ್ಹತೆ ಅಭ್ಯರ್ಥಿಗಳಿಗೆ | ರೂ.600/- |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ | ರೂ.300/- |
| ಮಾಜಿ ಸೈನಿಕ ಅಭ್ಯರ್ಥಿಗಳಿಗೆ | ರೂ. 50/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ,ಪ್ರವರ್ಗ-1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ಪಾವತಿಯಿಂದ ವಿನಾಯಿತಿ ಇದೆ. |

3.3 ಅಭ್ಯರ್ಥಿಗಳು ನಿಗದಿಪಡಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸತಕ್ಕದ್ದು. ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಒಂದೇ ಶುಲ್ಕವನ್ನು ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂತಿರುಗಿಸಲಾಗುವುದಿಲ್ಲ ಅಥವಾ ಅದನ್ನು ಆಯೋಗವು ನಡೆಸುವ ಇತರೆ ಪರೀಕ್ಷೆ ಅಥವಾ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ. ಶುಲ್ಕವನ್ನು ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

3.4 ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚು ಹುದ್ದೆಗಳಿಗೆ ಅರ್ಜಿ ಸಲ್ಲಿಸಿದಲ್ಲಿ ತಾವು ಆಯ್ಕೆ ಬಯಸುವ ಹುದ್ದೆಗಳ ಆದ್ಯತೆಯನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿಯೇ ಕಡ್ಡಾಯವಾಗಿ ನಮೂದಿಸತಕ್ಕದ್ದು. ಸದರಿ ಆದ್ಯತೆಯನ್ನು ಮುಖ್ಯ ಪಟ್ಟಿಗೆ ಮಾತ್ರ ಪರಿಗಣಿಸಲಾಗುವುದು.

4.ಅರ್ಹತಾ ಷರತ್ತುಗಳು:-

| | |
|---|---|
| ಅ) | ಭಾರತೀಯ ನಾಗರೀಕನಾಗಿರತಕ್ಕದ್ದು. |
| ಆ) | ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ. |
| ಇ) | ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ/ಮಾನಸಿಕ ನ್ಯೂನತೆಯಿಂದ ಮುಕ್ತರಾಗಿರಬೇಕು. |
| ಈ) | ದೈಹಿಕವಾಗಿ ಅನರ್ಹರಾಗಿದ್ದಾರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು ಕಾಯ್ದಿರಿಸಿಕೊಂಡಿದೆ ಮತ್ತು ಸರ್ಕಾರದ ವಿವೇಚನೆಯು ಯಾವುದೇ ವಿಧದಲ್ಲೂ ಈ ನಿಯಮಗಳ ಮೂಲಕ ಸೀಮಿತವಾಗಿರುವುದಿಲ್ಲ. |

ನಿಗದಿತ ಶೈಕ್ಷಣಿಕ ಅರ್ಹತೆಯ ಜೊತೆಗೆ ಈ ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಅಭ್ಯರ್ಥಿಗಳು ನೇಮಕಾತಿಗಾಗಿ ಅರ್ಜಿ ಸಲ್ಲಿಸಲು ಅರ್ಹತೆಯನ್ನು ಹೊಂದಿರುತ್ತಾರೆ.

5. ನೇಮಕಾತಿ ವಿಧಾನ: –

**ಕನ್ನಡ ಭಾಷಾ ಪರೀಕ್ಷೆ:-** ಸದರಿ ಹುದ್ದೆಗಳಿಗೆ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರ ಉಪನಿಯಮ (7) ರಲ್ಲಿ ನಿರ್ದಿಷ್ಟಪಡಿಸಲಾದಂತೆ ಯಾರೇ ಅಭ್ಯರ್ಥಿಗಳು ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹತೆಯನ್ನು ಪಡೆಯದ ಹೊರತು ಆಯ್ಕೆಗೆ ಅರ್ಹರಾಗುವುದಿಲ್ಲ. ಈ ಪರೀಕ್ಷೆಯು ಗರಿಷ್ಠ 150 ಅಂಕಗಳ ಒಂದು ಪ್ರಶ್ನೆಪತ್ರಿಕೆಯನ್ನು ಒಳಗೊಂಡಿದ್ದು, ಅಭ್ಯರ್ಥಿಯು ಈ ಪತ್ರಿಕೆಯಲ್ಲಿ ಅರ್ಹತೆ ಹೊಂದಲು ಕನಿಷ್ಠ 50 ಅಂಕಗಳನ್ನು ಗಳಿಸಬೇಕು. ಈ ಪ್ರಶ್ನೆ ಪತ್ರಿಕೆಯನ್ನು SSLC ಹಂತದಲ್ಲಿನ ಪ್ರಥಮ ಭಾಷೆ ಕನ್ನಡವನ್ನು ಮಾನದಂಡವನ್ನಾಗಿಟ್ಟುಕೊಂಡು ಸಿದ್ಧಪಡಿಸಲಾಗುವುದು.

5.2 ಸದರಿ ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆಯಲ್ಲಿ ಅರ್ಹರಾದ ನಂತರ ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021 ರ ಉಪ ನಿಯಮ 5(ಡಿ)ರ ಪ್ರಕಾರ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಕನಿಷ್ಠ ಪಕ್ಷ ಶೇಕಡ 35 ರಷ್ಟು ಅಂಕಗಳನ್ನು ಗಳಿಸುವುದು ಕಡ್ಡಾಯವಾಗಿರುತ್ತದೆ. ಈ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡವಾರು ಪ್ರಮಾಣದ ಆಧಾರದ ಮೇಲೆ (On the basis of the percentage of marks secured in Competitive Examination) ಹಾಗೂ ಚಾಲ್ತಿಯಲ್ಲಿರುವ ಮೀಸಲಾತಿ ನಿಯಮಗಳನ್ವಯ ಆಯ್ಕೆ ಮಾಡಲಾಗುವುದು.

**ವಿಶೇಷ ಸೂಚನೆ:-** ಕನ್ನಡ ಭಾಷಾ ಪರೀಕ್ಷೆಗೆ ಸಂಬಂಧಿಸಿದಂತೆ ಅಭ್ಯರ್ಥಿಗಳು ಕರ್ನಾಟಕ ನಾಗರೀಕ ಸೇವಾ (ನೇರ ನೇಮಕಾತಿ) (ಸಾಮಾನ್ಯ) ನಿಯಮಗಳು 2021ರಡಿ ಈಗಾಗಲೇ ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ:29-11-2022ರಂದು ಹಾಗೂ ನಂತರ ನಡೆಸಲಾದ ಕನ್ನಡ ಭಾಷಾ ಪರೀಕ್ಷೆಗಳಿಗೆ ಹಾಜರಾಗಿ ಉತ್ತೀರ್ಣರಾಗಿದ್ದಲ್ಲಿ ಅದರ ಫಲಿತಾಂಶವನ್ನು ಈ ಅಧಿಸೂಚನೆಯಲ್ಲಿನ ಹುದ್ದೆಗಳ ಕನ್ನಡ ಭಾಷಾ ಪರೀಕ್ಷೆಗೆ ಪರಿಗಣಿಸಲಾಗುವುದು. ಆದ್ದರಿಂದ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಆನ್‌ಲೈನ್ ಅರ್ಜಿಯಲ್ಲಿನ ನಿಗದಿತ ಅಂಕಣದಲ್ಲಿ ಕನ್ನಡ ಭಾಷಾ ಪರೀಕ್ಷೆ ಕುರಿತಂತೆ ಕೇಳಿರುವ ಮಾಹಿತಿಯನ್ನು ತಪ್ಪದೇ ನಮೂದಿಸತಕ್ಕದ್ದು.

## 5.3 ಸ್ಪರ್ಧಾತ್ಮಕ ಪರೀಕ್ಷಾ ವಿಧಾನ:

ಕರ್ನಾಟಕ ನಾಗರೀಕ ಸೇವಾ (ನೇರನೇಮಕಾತಿ) (ಸಾಮಾನ್ಯ) ನಿಯಮಗಳು 2021 ರ ಉಪನಿಯಮ 6(2)(ಎ) ರನ್ವಯ ಪದವಿ ಮಟ್ಟದ ವಿದ್ಯಾರ್ಹತೆಗಳು ಅಗತ್ಯವಿರುವ ಹುದ್ದೆಗಳಿಗಾಗಿ ನಡೆಸಲಾಗುವ ಸ್ಪರ್ಧಾತ್ಮಕ ಪರೀಕ್ಷೆಯು ಎರಡು ಪತ್ರಿಕೆಗಳನ್ನು ಒಳಗೊಂಡಿರುತ್ತದೆ. ಪ್ರತಿಯೊಂದು ಪತ್ರಿಕೆಯು ಗರಿಷ್ಠ 100 ಅಂಕಗಳೊಂದಿಗೆ ಲಿಖಿತ ಪ್ರಶ್ನೆಗಳನ್ನು ಒಳಗೊಂಡಿದ್ದು ವಸ್ತುನಿಷ್ಠ ಬಹುಆಯ್ಕೆ ಮಾದರಿಯಲ್ಲಿರುತ್ತವೆ. ಈ ಎರಡು ಪತ್ರಿಕೆಗಳಲ್ಲಿನ ಪ್ರತಿಯೊಂದು ಪ್ರಶ್ನೆಯು ಋಣಾತ್ಮಕ (Negative) ಅಂಕಗಳ ಸ್ವರೂಪದ್ದಾಗಿದ್ದು, ಪ್ರತಿ ತಪ್ಪು ಉತ್ತರಕ್ಕೆ ಪ್ರಶ್ನೆಗೆ ನಿಗದಿಪಡಿಸಿದ ಅಂಕಗಳ ನಾಲ್ಕನೇ ಒಂದು ಭಾಗದಷ್ಟು (1/4) ಅಂಕಗಳನ್ನು ಕಡಿತಗೊಳಿಸಲಾಗುವುದು. ಅಭ್ಯರ್ಥಿಗಳು ಎರಡೂ ಪತ್ರಿಕೆಗಳ ಪರೀಕ್ಷೆಗಳಿಗೆ ಹಾಜರಾಗುವುದು ಕಡ್ಡಾಯವಾಗಿರುತ್ತದೆ.

**ಪತ್ರಿಕೆ -1 ರ ಪಠ್ಯಕ್ರಮವು ಈ ಕೆಳಗೆ ನಿರ್ದಿಷ್ಟಪಡಿಸಿದಂತೆ ಇರುತ್ತದೆ.**

### ಪಠ್ಯಕ್ರಮ

**ಪತ್ರಿಕೆ - 1 ಸಾಮಾನ್ಯ ಜ್ಞಾನ** — **ಗರಿಷ್ಠ ಅಂಕಗಳು : 100**
**ಅವಧಿ : 1 ½ ಗಂಟೆ**

(ಎ) ಪ್ರಚಲಿತ ಘಟನೆಗಳಿಗೆ ಸಂಬಂಧಿಸಿದ ವಿಷಯಗಳ ಸಾಮಾನ್ಯ ಜ್ಞಾನ

(ಬಿ) ಸಾಮಾನ್ಯ ವಿಜ್ಞಾನ ವಿಷಯಗಳು

(ಸಿ) ಭೂಗೋಳ ಶಾಸ್ತ್ರ ವಿಷಯಗಳು

(ಡಿ) ಸಮಾಜ ವಿಜ್ಞಾನ ವಿಷಯಗಳು

(ಇ) ಭಾರತೀಯ ಸಮಾಜ ಮತ್ತು ಅದರ ಬೆಳವಣಿಗೆಗಳ ಇತಿಹಾಸದ ವಿಷಯಗಳು

(ಎಫ್) ಭಾರತದ ಮತ್ತು ಕರ್ನಾಟಕದ ಇತಿಹಾಸ

(ಜಿ) ಭಾರತದ ಸಂವಿಧಾನದ ಮತ್ತು ಸಾರ್ವಜನಿಕ ಆಡಳಿತ

(ಎಚ್) ಪ್ರಾಯೋಗಿಕ ಜ್ಞಾನ ಮತ್ತು ಬೌದ್ಧಿಕ ಸಾಮರ್ಥ್ಯದ ವಿಷಯಗಳು (ಎಸ್.ಎಸ್.ಎಲ್.ಸಿ ಮಟ್ಟದ)

(ಐ) ಕರ್ನಾಟಕದ ಸಾಮಾಜಿಕ ಮತ್ತು ಸಾಂಸ್ಕೃತಿಕ ಇತಿಹಾಸದ ವಿಷಯಗಳು

(ಜೆ) ಸ್ವಾತಂತ್ರ್ಯಾ ನಂತರದಲ್ಲಿ ಕರ್ನಾಟಕದ ಭೂ ಸುಧಾರಣೆಗಳು ಮತ್ತು ಸಾಮಾಜಿಕ ಬದಲಾವಣೆಗಳ ವಿಷಯಗಳು

(ಕೆ) ಕರ್ನಾಟಕದ ಅರ್ಥವ್ಯವಸ್ಥೆ: ಅದರ ಸಾಮರ್ಥ್ಯ ಮತ್ತು ದೌರ್ಬಲ್ಯತೆ ಪ್ರಸ್ತುತ ಸ್ಥಿತಿಗತಿ ಕುರಿತ ವಿಷಯಗಳು

(ಎಲ್) ಗ್ರಾಮೀಣಾಭಿವೃದ್ಧಿ, ಪಂಚಾಯತ್‌ರಾಜ್ ಸಂಸ್ಥೆಗಳು ಮತ್ತು ಗ್ರಾಮೀಣ ಸಹಕಾರ ಸಂಸ್ಥೆಗಳ ವಿಷಯಗಳು

(ಎಂ) ಕರ್ನಾಟಕ ಪರಿಣಾಮಕಾರಿ ಆಡಳಿತಕ್ಕಾಗಿ ವಿಜ್ಞಾನ ಮತ್ತು ತಂತ್ರಜ್ಞಾನದ ಪಾತ್ರ ಕುರಿತ ವಿಷಯಗಳು

(ಎನ್) ಕರ್ನಾಟಕದ ಪರಿಸರ ಸಂಬಂಧಿ ಸಮಸ್ಯೆಗಳು ಮತ್ತು ಅಭಿವೃದ್ಧಿ ಕುರಿತ ವಿಷಯಗಳು.

(ಓ) ಬೌದ್ಧಿಕ ಸಾಮರ್ಥ್ಯದ ವಿಷಯಗಳು

**ಪತ್ರಿಕೆ - II ಅನ್ನು ಈ ಕೆಳಗೆ ನಿರ್ದಿಷ್ಟಪಡಿಸಲಾದಂತೆ ಮೂರು ಭಾಗಗಳಾಗಿ ವಿಭಾಗಿಸಲಾಗಿರುತ್ತದೆ**

**ಪತ್ರಿಕೆ - II** ಗರಿಷ್ಠ ಅಂಕಗಳು : 100

ಅವಧಿ : 02 ಗಂಟೆ

| | |
|---|---|
| (ಎ) ಸಾಮಾನ್ಯ ಕನ್ನಡ | ಗರಿಷ್ಠ ಅಂಕಗಳು : 35 |
| (ಬಿ) ಸಾಮಾನ್ಯ ಇಂಗ್ಲೀಷ್ | ಗರಿಷ್ಠ ಅಂಕಗಳು : 35 |
| (ಸಿ) ಕಂಪ್ಯೂಟರ್ ಜ್ಞಾನ | ಗರಿಷ್ಠ ಅಂಕಗಳು : 30 |

ಸ್ಪರ್ಧಾತ್ಮಕ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕನ್ನಡ ಮತ್ತು ಆಂಗ್ಲ ಭಾಷೆಯಲ್ಲಿ ಮಾತ್ರ ಇರುತ್ತವೆ. ಪ್ರಶ್ನೆ ಪತ್ರಿಕೆಯಲ್ಲಿ ಕನ್ನಡ ಭಾಷೆಯಲ್ಲಿರುವ ಪ್ರಶ್ನೆಗಳ ಭಾಷಾಂತರದಲ್ಲಿ ಏನಾದರೂ ಅಸ್ಪಷ್ಟತೆ ಇದ್ದಲ್ಲಿ ಅಭ್ಯರ್ಥಿಗಳು ಆಂಗ್ಲ ಭಾಷೆಯಲ್ಲಿರುವ ಪ್ರಶ್ನೆಗಳನ್ನು ನೋಡಿ ಅರ್ಥೈಸಿಕೊಳ್ಳುವುದು.

ಸದರಿ ಹುದ್ದೆಗಳಿಗೆ ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳ ವೇಳಾಪಟ್ಟಿಯನ್ನು ನಂತರದಲ್ಲಿ ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

### 6.2 . ಸ್ಪರ್ಧಾತ್ಮಕ ಪರೀಕ್ಷಾ ಕೇಂದ್ರ:-

**ಕನ್ನಡ ಭಾಷಾ ಪರೀಕ್ಷೆ / ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಆಯೋಗವು ನಿಗದಿಪಡಿಸುವ ಯಾವುದೇ ಕೇಂದ್ರ ಸ್ಥಳದಲ್ಲಿ ನಡೆಸಲಾಗುವುದು ಹಾಗೂ ಅಭ್ಯರ್ಥಿಗಳಿಗೆ ಪರೀಕ್ಷಾ ಕೇಂದ್ರದ ಆಯ್ಕೆಯ ಅವಕಾಶವಿರುವುದಿಲ್ಲ.**

**ವಿಶೇಷ ಸೂಚನೆಗಳು:-**

ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಗೆ ಅವರ ಪ್ರವೇಶ ಪತ್ರ ಹಾಗೂ ಅವರ ಭಾವಚಿತ್ರವಿರುವ ಮೂಲ ಗುರುತಿನ ಚೀಟಿ (ಚುನಾವಣಾ ಐಡಿ/ ಆಧಾರ್ ಕಾರ್ಡ್ / ಡ್ರೈವಿಂಗ್ ಲೈಸನ್ಸ್/ಪಾನ್ ಕಾರ್ಡ್/ಪಾಸ್ ಪೋರ್ಟ್ / ಸರ್ಕಾರಿ ನೌಕರರ ಐಡಿ) ಯನ್ನು ಪರೀಕ್ಷಾ ಕೇಂದ್ರದಲ್ಲಿ ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಪರೀಕ್ಷಾ ಕೇಂದ್ರಕ್ಕೆ ಪ್ರವೇಶವನ್ನು ನೀಡಲಾಗುವುದಿಲ್ಲ ಹಾಗೂ ಡೌನ್‌ಲೋಡ್ ಮಾಡಿರುವ ಗುರುತಿನ ಚೀಟಿಗಳು / ಇತರೆ ಯಾವುದೇ ಗುರುತಿನ ಚೀಟಿಗಳು/ ಕಲರ್ ಜೆರಾಕ್ಸ್ ಪ್ರತಿಗಳನ್ನು ಪರಿಗಣಿಸಲಾಗುವುದಿಲ್ಲ.

ಸದರಿ ಹುದ್ದೆಗಳ ನೇಮಕಾತಿಗಳ ಸ್ಪರ್ಧಾತ್ಮಕ ಪರೀಕ್ಷೆಯನ್ನು ಆಫ್ ಲೈನ್–ಓ.ಎಂ.ಆರ್ ಮಾದರಿ (Offline-OMR type) ಅಥವಾ ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ (Computer based recruitment test-CBRT) ಮುಖಾಂತರ ನಡೆಸಲಾಗುವುದು. ಈ ವಿಷಯದಲ್ಲಿ ಆಯೋಗದ ತೀರ್ಮಾನವೇ ಅಂತಿಮವಾಗಿರುತ್ತದೆ. ಗಣಕ ಯಂತ್ರದ ಮೂಲಕ ಸ್ಪರ್ಧಾತ್ಮಕ (Computer based recruitment test-CBRT) ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಅಭ್ಯರ್ಥಿಗಳಿಗೆ ಈ ಸಂಬಂಧ ಸೂಚನೆಗಳನ್ನು ಹಾಗೂ ಅಣಕು ಪರೀಕ್ಷೆಯನ್ನು (Mock Test) ತೆಗೆದುಕೊಳ್ಳುವ ಬಗ್ಗೆ ಮಾಹಿತಿಯನ್ನು ಆಯೋಗದ ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು.

ಅಭ್ಯರ್ಥಿಗಳು ಪರೀಕ್ಷೆಯ ಪ್ರವೇಶ ಪತ್ರಗಳನ್ನು ಆಯೋಗದ ವೆಬ್ ಸೈಟ್ ನಿಂದ ಡೌನ್ ಲೋಡ್ ಮಾಡಿಕೊಳ್ಳಲು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು ಹಾಗೂ ಈ ಬಗ್ಗೆ ಮಾಹಿತಿಯನ್ನು ಆಯೋಗದ ವೆಬ್ಸೈಟ್ ನಲ್ಲಿಯೂ ಬಿತ್ತರಿಸಲಾಗುವುದು. ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶ ಪತ್ರಗಳನ್ನು ಡೌನ್ ಲೋಡ್ ಮಾಡಿಕೊಂಡು ಪ್ರವೇಶ ಪತ್ರದ ಪ್ರತಿಯೊಂದಿಗೆ ಪರೀಕ್ಷೆಗೆ ಹಾಜರಾಗತಕ್ಕದ್ದು.

**ಟಿಪ್ಪಣಿ:-** ಪ್ರಶ್ನೆ ಪತ್ರಿಕೆ ಬಗ್ಗೆ ಯಾವುದೇ ಬಗೆಯ ಆಕ್ಷೇಪಣೆ ಇದ್ದಲ್ಲಿ, ಪರೀಕ್ಷಾ ಕೇಂದ್ರವನ್ನು ಬಿಡುವ ಮೊದಲೇ ಪರೀಕ್ಷಾ ದಿನವೇ ಸಂಬಂಧಿತ ಮೇಲ್ವಿಚಾರಕರ ಮುಖಾಂತರ ಲಿಖಿತ ಮನವಿಯನ್ನು ಆಯೋಗಕ್ಕೆ ಸಲ್ಲಿಸಿ ಸ್ವೀಕೃತಿ (Acknowledgement) ಪಡೆಯಬೇಕು. ಪರೀಕ್ಷಾ ಕೇಂದ್ರಬಿಟ್ಟನಂತರ ಕಳುಹಿಸುವ ಯಾವುದೇ ಆಕ್ಷೇಪಣೆಯನ್ನು ಮಾನ್ಯ ಮಾಡಲಾಗುವುದಿಲ್ಲ.

7. ಶೈಕ್ಷಣಿಕ ವಿದ್ಯಾರ್ಹತೆ ಮತ್ತು ವಯೋಮಿತಿ:-

7(1) ಶೈಕ್ಷಣಿಕ ವಿದ್ಯಾರ್ಹತೆ:-ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅನುಸೂಚಿಯಲ್ಲಿ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯ ಅಂಕಪಟ್ಟಿ / ಪ್ರಮಾಣ ಪತ್ರ / ಘಟಿಕೋತ್ಸವ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಕಡ್ಡಾಯವಾಗಿ ಅಪ್‌ಲೋಡ್ ಮಾಡತಕ್ಕದ್ದು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಹೆಚ್ಚಿನ ವಿದ್ಯಾರ್ಹತೆಯನ್ನು ಹೊಂದಿದ್ದರೂ ಸಹ ಪರಿಗಣಿಸಲಾಗುವುದಿಲ್ಲ.

6 (2) ವಯೋಮಿತಿ:- ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಕಂಡಂತೆ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಹಾಗೂ ಗರಿಷ್ಠ ವಯೋಮಿತಿಯನ್ನು ಮೀರಬಾರದು.

| |
|---|
| ಕನಿಷ್ಠ – 18 ವರ್ಷಗಳು, |
| ಗರಿಷ್ಠ – ಸಾಮಾನ್ಯ ಅರ್ಹತೆ-35 ವರ್ಷಗಳು, |
| ಪ್ರವರ್ಗ 2(ಎ), 2(ಬಿ), 3(ಎ), 3(ಬಿ)- 38 ವರ್ಷಗಳು |
| ಪ.ಜಾ/ ಪ.ಪಂ/ ಪ್ರವರ್ಗ1- 40 ವರ್ಷಗಳು |

## ಅನುಸೂಚಿ

| | |
|---|---|
| ಇಲಾಖೆಯ ಹೆಸರು/ ಹುದ್ದೆಯ ಪದನಾಮ / ಹುದ್ದೆಗಳ ಸಂಖ್ಯೆ | 1. ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಲ್ಲಿನ ಕೈಗಾರಿಕಾ ವಿಸ್ತಾರಣಾಧಿಕಾರಿ 50 ಹುದ್ದೆಗಳು (ಆರ್.ಪಿ.ಸಿ.) |
| ವೇತನ ಶ್ರೇಣಿ | ರೂ.33,450 /- - 62,600/- |
| ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ | Must be holder of Degree in Science or Commerce or Business Administration or any Branch of Bachelor of Engineering |

ಹುದ್ದೆಗಳ ವರ್ಗೀಕರಣ

1ನೇ ವೃತ್ತದ 01ನೇ ಬಿಂದುವಿನಿಂದ 50 ನೇ ಬಿಂದುವಿನವರೆಗೆ

| ಮೀಸಲಾತಿ | ಇತರೆ | ಮಹಿಳೆ | ಗ್ರಾಮೀಣ | ಮಾ.ಸೈ | ಯೋ.ಅ | ಅಂ.ವಿ | ಕ.ಮಾ.ಅ | ತೃ.ಲಿ | ಒಟ್ಟು |
|---|---|---|---|---|---|---|---|---|---|
| ಪ.ಜಾ | 2 | 3 | 3 | - | - | 1* | - | - | 9 |
| ಪ.ಪಂ | 1 | 1 | 1 | - | - | 1* | - | - | 4 |
| ಪ್ರ-1 | 1 | 1 | - | - | - | - | - | - | 2 |
| 2ಎ | 2 | 2 | 2 | - | - | 1* | - | - | 7 |
| 2ಬಿ | 1 | 1 | - | - | - | - | - | - | 2 |
| 3ಎ | 1 | 1 | - | - | - | - | - | - | 2 |
| 3ಬಿ | 1 | 1 | - | - | - | - | - | - | 2 |
| ಸಾ.ಅ | 3 | 8 | 5 | 2 | 1 | 1* | 1 | 1 | 22 |
| ಒಟ್ಟು: | 12 | 18 | 11 | 2 | 1 | 4* | 1 | 1 | 50 |

* Blind / Low vision ಅಭ್ಯರ್ಥಿಗಳಿಗೆ ಮಾತ್ರ

| | |
|---|---|
| ಇಲಾಖೆಯ ಹೆಸರು/ಹುದ್ದೆಯ ಪದನಾಮ/ ಹುದ್ದೆಗಳ ಸಂಖ್ಯೆ | 2. ಸಾರ್ವಜನಿಕ ಗ್ರಂಥಾಲಯ ಇಲಾಖೆಯಲ್ಲಿನ ಗ್ರಂಥಪಾಲಕ-10 ಹುದ್ದೆಗಳು |
| ವೇತನ ಶ್ರೇಣಿ | ರೂ.37,900 - 70,850/- |
| ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆ | Must be holder of degree in Library Science of an University established by law in India. |

ಹುದ್ದೆಗಳ ವರ್ಗೀಕರಣ

1ನೇ ವೃತ್ತದ 01ನೇ ಬಿಂದುವಿನಿಂದ 10ನೇ ಬಿಂದುವಿನವರೆಗೆ

| ಮೀಸಲಾತಿ | ಇತರೆ | ಮಹಿಳೆ | ಗ್ರಾ.ಅ | ಅಂ.ವಿ | ಒಟ್ಟು |
|---|---|---|---|---|---|
| ಪ.ಜಾ | 1 | 1 | – | – | 2 |
| ಪ.ಪಂ | 1 | – | – | – | 1 |
| ಪ್ರ-1 | 1 | – | – | – | 1 |
| 2ಎ | 1 | – | – | – | 1 |
| ಸಾ.ಅ | 1 | 2 | 1 | 1 # | 5 |
| ಒಟ್ಟು | 5 | 3 | 1 | 1 | 10 |

#(a) D, HH

(b) OA, BA, OL, BL, OAL, BLA, BLOA, CP, LC, Dw, AAV

(c) ASD (M), SLD, MI

(d) MD involving (a) to (c) above

7(3). ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.

| | | |
|---|---|---|
| (ಅ) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |

| | | |
|---|---|---|
| (ಅ) | ಮಾಜಿ ಸೈನಿಕನಾಗಿದ್ದಲ್ಲಿ | ಸೇವೆ ಸಲ್ಲಿಸಿರುವಷ್ಟು ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು |
| (ಇ) | National Cadet Corps ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಈ) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| (ಉ) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| (ಊ) | ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| (ಋ) | ವಿಧವೆಯಾಗಿದ್ದಲ್ಲಿ (ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣ ಪತ್ರ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು) | 10 ವರ್ಷಗಳು |
| (ೠ) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಿಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್ ರಿಂದ ಪಡೆದಿಟ್ಟುಕೊಂಡು ಆಯೋಗವು ಸೂಚಿಸಿದಾಗ ಅದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು | 10 ವರ್ಷಗಳು |

## 8. ಅರ್ಜಿಗಳ ಸೂಕ್ಷ್ಮ ಪರಿಶೀಲನೆ :-

ಈ ಹುದ್ದೆಗಳು ಗ್ರೂಪ್ 'ಸಿ' ಹುದ್ದೆಗಳಾಗಿರುವುದರಿಂದ ಆನ್‌ಲೈನ್ ಅರ್ಜಿಯೊಂದಿಗೆ ಸಲ್ಲಿಸುವ ಲಗತ್ತುಗಳ ಆಧಾರದ ಮೇಲೆ ಮಾತ್ರವೇ ದಾಖಲೆಗಳ ಪರಿಶೀಲನೆ ಮಾಡಲಾಗುವುದು. ಅವಶ್ಯಕ ಸಂದರ್ಭಗಳಲ್ಲಿ ಆಯೋಗವು ಮೂಲ ದಾಖಲೆಗಳ ಪರಿಶೀಲನೆಯನ್ನು ನಡೆಸಲು ತೀರ್ಮಾನಿಸಿದಲ್ಲಿ ಈಗಾಗಲೇ ಆನ್‌ಲೈನ್ ಅರ್ಜಿಯೊಂದಿಗೆ ಅಪ್‌ಲೋಡ್ ಮಾಡಿರುವ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು. ಏನೇ ಸಂದರ್ಭವಿದ್ದರೂ ವಯೋಮಿತಿ, ವಿದ್ಯಾರ್ಹತೆ ಮತ್ತು ಮೀಸಲಾತಿಗಳಿಗೆ ಸಂಬಂಧಿಸಿದಂತೆ ಆನ್‌ಲೈನ್ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಅಪ್‌ಲೋಡ್ ಮಾಡಲಾದ ಪ್ರಮಾಣ ಪತ್ರಗಳನ್ನೇ ಅಂತಿಮವೆಂದು ತೀರ್ಮಾನಿಸಲಾಗುತ್ತದೆ. ಆದ್ದರಿಂದ ಅಭ್ಯರ್ಥಿಗಳು ಜಾಗರೂಕತೆಯಿಂದ ತಮಗೆ ಅನ್ವಯಿಸುವ ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಗೋಚರಿಸುವ ರೀತಿಯಲ್ಲಿ ಅಪ್‌ಲೋಡ್ ಮಾಡತಕ್ಕದ್ದು.

**ಆದ್ದರಿಂದ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಕಡ್ಡಾಯವಾಗಿ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಅಪ್ಲೋಡ್ ಮಾಡಬೇಕು ತಪ್ಪಿದ್ದಲ್ಲಿ ಅವರ ಮೀಸಲಾತಿ/ ಅಭ್ಯರ್ಥಿತ್ವವನ್ನು ಪರಿಗಣಿಸಲಾಗುವುದಿಲ್ಲ.**

(1) ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರುವ ಬಗ್ಗೆ ಪ್ರಮಾಣ ಪತ್ರಗಳು/ಎಲ್ಲಾ ವರ್ಷಗಳ ಅಂಕಪಟ್ಟಿಗಳು ಹಾಗೂ ಡಿಪ್ಲೋಮಾ/ಪದವಿಯ ಘಟಿಕೋತ್ಸವ ಪ್ರಮಾಣ ಪತ್ರ. ಅಭ್ಯರ್ಥಿಗಳು ತಮಗೆ ಅನ್ವಯಿಸುವ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಪೂರ್ಣಗೊಳಿಸಿರುವ ಬಗ್ಗೆ ಸಂಬಂಧಿತ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ/ ಘಟಿಕೋತ್ಸವ ಪ್ರಮಾಣ ಪತ್ರವನ್ನು ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ.

(2) ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಅಂಕಪಟ್ಟಿ/ ಎಸ್.ಎಸ್.ಎಲ್.ಸಿ ವರ್ಗಾವಣೆಯ ಪ್ರಮಾಣ ಪತ್ರ /ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತ ಭಾಗ (Extract of cumulative record).

**ಈ ಕೆಳಕಂಡ ಮೀಸಲಾತಿ ಕೋರಿದ್ದಲ್ಲಿ**

(3) ಸೈನಿಕ ಸೇವೆಯಿಂದ ಬಿಡುಗಡೆಯಾದ/ ಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರ (ಪೂರ್ಣವಾಗಿ) (Discharge certificate) ಮತ್ತು ಪೆನ್ಷನ್ ಪಡೆಯುತ್ತಿರುವ ದಾಖಲೆಯ ಪ್ರತಿ/ ಮಾಜಿ ಸೈನಿಕರ ಅವಲಂಭಿತರಾಗಿದ್ದಲ್ಲಿ, ಮಾಜಿ ಸೈನಿಕರು ಸೇವೆಯಲ್ಲಿರುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರ (Dependant certificate)

(4) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮಿಸಲಾತಿ ಅಭ್ಯರ್ಥಿಗಳು ನಮೂನೆ ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ.

(5) ಸಾಮಾನ್ಯ ಅರ್ಹತೆ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರ ನಮೂನೆ-1 ಮತ್ತು 2 ರಲ್ಲಿ / ಇತರೆ ಅಭ್ಯರ್ಥಿಗಳು ನಮೂನೆ- 2ರಲ್ಲಿ

(6) ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ

(7) (a)ಅಂಗವಿಕಲ ಮೀಸಲಾತಿ ಪ್ರಮಾಣ ಪತ್ರ

(b)ಪರೀಕ್ಷೆ ಬರೆಯಲು ದೈಹಿಕ ಅಸಮರ್ಥತೆ ಹೊಂದಿರುವ ಬಗ್ಗೆ/ಲಿಪಿಕಾರರ ಸೇವೆ ಪಡೆಯಲು ಅನುಬಂಧ-01 & 02 ರಲ್ಲಿ (ಅವಶ್ಯಕತೆ ಇದ್ದಲ್ಲಿ)

(8) ವಯೋಮಿತಿ ಸಡಿಲಿಕೆ ಕೋರುವ ಸರ್ಕಾರಿ ನೌಕರರು ನಿಯಮಗಳಲ್ಲಿರುವಂತೆ ಸೇವೆ ಸಲ್ಲಿಸಿರುವ ನೇಮಕಾತಿ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.

(9) ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ ಪ್ರಮಾಣ ಪತ್ರ

(10) ತೃತೀಯ ಲಿಂಗದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರ

8.1 ಮೀಸಲಾತಿ ಪ್ರಮಾಣ ಪತ್ರಗಳು:-

| | | |
|---|---|---|
| (1) ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು | ಮೀಸಲಾತಿ ಪ್ರಮಾಣ ಪತ್ರಗಳನ್ನು ಸಲ್ಲಿಸಬೇಕಾದ ನಮೂನೆಗಳು :- | |
| | ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ `ಡಿ' |
| | ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳು | ನಮೂನೆ `ಇ' |
| | ಪ್ರವರ್ಗ-2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು | ನಮೂನೆ `ಎಫ್' |
| | *ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.<br>ಹಿಂದುಳಿದ ವರ್ಗಗಳ ಪ್ರವರ್ಗ-2(ಎ), ಪ್ರವರ್ಗ-2(ಬಿ), ಪ್ರವರ್ಗ-3(ಎ) ಮತ್ತು ಪ್ರವರ್ಗ-3(ಬಿ) ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ (Government Notification No SWD 155 BCA 2012 Dt: 17-02-2012 ರನ್ವಯ). ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು.<br>ವಿಶೇಷ ಸೂಚನೆ: ಸರ್ಕಾರಿ ಆದೇಶ ಸಂ: ಸಕಇ 179 ಬಿಸಿಎ 2010, ಬೆಂಗಳೂರು ದಿ:16-07-2011ರ ಆದೇಶದನುಸಾರ ಬಲಿಜ ಮತ್ತು ಉಪ ಜಾತಿಗಳಾದ ಬಲಜಿಗ/ಬಣಜಿಗ/ಗೌಡಬಣಜಿಗ, ನಾಯ್ಡು, ತೆಲಗ ಬಲಿಜ/ತೆಲಗ ಬಣಜಿಗ/ಶೆಟ್ಟಿ ಬಲಿಜ, ಶೆಟ್ಟಿ ಬಣಜಿಗ/ಬಣಜಿಗ ಶೆಟ್ಟಿ, ದಾಸರ ಬಲಿಜ/ದಾಸರ ಬಲಜಿಗ/ದಾರಸ ಬಣಜಿಗ/ದಾಸ ಬಣಜಿಗ, ಕಸ್ಬನ್, ಮುನ್ನೂರ/ಮುನ್ನಾರ್/ಮುನ್ನೂರ್ ಕಾಪು, ಬಳಿಗಾರ/ಬಳೆ ಬಣಜಿಗ/ಬಳೆಬಲಜಿಗ/ಬಳೆ ಜೆಟ್ಟಿ/ಬಣಗಾರ, ರೆಡ್ಡಿ (ಬಲಿಜ), ಜನಪ್ಪನ್, ಉಪ್ಪಾರ (ಬಲಿಜ), ತುಲೇರು(ಬಲಿಜ) ಜನಾಂಗದ ಅಭ್ಯರ್ಥಿಗಳು ಶಿಕ್ಷಣದ ಸಲುವಾಗಿ ಪಡೆದಿರುವ 2ಎ ಮೀಸಲಾತಿ ಪ್ರಮಾಣ ಪತ್ರ(ನಮೂನೆ-ಎಫ್) ಗಳನ್ನು ಉದ್ಯೋಗದಲ್ಲಿನ ಮೀಸಲಾತಿಗೆ ಪರಿಗಣಿಸಲಾಗುವುದಿಲ್ಲ.<br>ಪ.ಜಾ/ಪ.ಪಂ/ಪ್ರ.1 ರ ಅಭ್ಯರ್ಥಿಗಳು ಪಡೆದಿರುವ/ಪಡೆಯುವ ಪ್ರಮಾಣ ಪತ್ರಗಳು ಜೀವಿತ ಅವಧಿಯವರೆಗೆ ಅಥವಾ ರದ್ದು ಮಾಡುವವರೆವಿಗೆ ಸಿಂಧುತ್ವವನ್ನು ಹೊಂದಿದ್ದು, ಇಂತಹ ಪ್ರಮಾಣ ಪತ್ರಗಳನ್ನು ದಿನಾಂಕದ ಮಿತಿಯಿಲ್ಲದೇ ಪರಿಗಣಿಸಲಾಗುವುದು(ಸರ್ಕಾರದ ಸುತ್ತೋಲೆ ಸಂಖ್ಯೆ SWD 155 BCA 2011ದಿನಾಂಕ 22-02-2012). | |
| (2) ಗ್ರಾಮೀಣ ಅಭ್ಯರ್ಥಿ ಗಳಿಗೆ ಮೀಸಲಾತಿ | ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 08 ಸೆನೆನಿ 2001 ದಿನಾಂಕ:13-02-2001 ರನ್ವಯ ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ 1 ರಿಂದ 10ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾಗಿರುವವರು ಈ ಮೀಸಲಾತಿಯನ್ನು ಪಡೆಯಲು ಅರ್ಹರು. | |
| | ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನುಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2ನ್ನು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ (Creamy layer) ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರ್‌ರವರಿಂದ ಪಡೆದಿಟ್ಟುಕೊಂಡಿರತಕ್ಕದ್ದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ನಮೂನೆ-1 ರಲ್ಲಿಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರತಕ್ಕದ್ದು ಹಾಗೂ ಅಭ್ಯರ್ಥಿಗಳು ತಮಗೆ ಸಂಬಂಧಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವಾಗ ಅಪ್ಲೋಡ್ ಮಾಡತಕ್ಕದ್ದು. | |

| | |
|---|---|
| | ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಅಪ್ಲೋಡ್ ಮಾಡತಕ್ಕದ್ದು. (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು ಹಾಗೂ ಅಂತಹವರು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ. |
| | ಜಾತಿ ಹಾಗೂ ಗ್ರಾಮೀಣ ಮೀಸಲಾತಿ ಕೋರಿರುವ ಅಭ್ಯರ್ಥಿಗಳ ಜಾತಿ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತವಾದಲ್ಲಿ, ಅಂತಹವರು ಗ್ರಾಮೀಣ ಮೀಸಲಾತಿಗೂ ಸಹ ಅನರ್ಹರಾಗುತ್ತಾರೆ. |
| (3) ಕನ್ನಡ ಮಾಧ್ಯಮ ಅಭ್ಯರ್ಥಿಗಳಿಗೆ ಮೀಸಲಾತಿ | ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ: 24-10-2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು 1ನೇ ತರಗತಿಯಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಮೊಹರು ಮತ್ತು ಜಾರಿ ಮಾಡಿದ ದಿನಾಂಕದೊಂದಿಗೆ ನಿಗದಿತ ನಮೂನೆಯಲ್ಲಿ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು.(ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). |
| (4) ಮಾಜಿ ಸೈನಿಕರಿಗೆ ಮೀಸಲಾತಿ | ಮಾಜಿ ಸೈನಿಕ ಮೀಸಲಾತಿಯನ್ನುಕೋರುವ ಅಭ್ಯರ್ಥಿಗಳು ಈ ಸಂಬಂಧ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಪ್‌ಲೋಡ್ ಮಾಡತಕ್ಕದ್ದು.<br>(1) ಮಾಜಿ ಸೈನಿಕ ಎಂದರೆ ಸಶಸ್ತ್ರ ದಳಗಳಾದ ನಿಯಮಿತ ಭೂದಳ, ನೌಕಾದಳ ಮತ್ತು ವಾಯು ದಳದಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಾಗಿಲ್ಲದೇ) ಸೇವೆ ಸಲ್ಲಿಸಿರುವ ವ್ಯಕ್ತಿ ಎಂದು ಅರ್ಥ. ಆದರೆ ಡಿಫೆನ್ಸ್ ಸೆಕ್ಯೂರಿಟಿ ಕೋರ್, ಜನರಲ್ ರಿಸರ್ವ್ ಇಂಜಿನಿಯರಿಂಗ್ ಫೋರ್ಸ್, ಲೋಕ ಸಹಾಯಕ ಸೇನಾ ಮತ್ತು ಪ್ಯಾರಾ ಮಿಲಿಟರಿ ದಳದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಸೇರ್ಪಡೆಯಾಗುವುದಿಲ್ಲ ಮತ್ತು<br>(ಅ) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ<br>ಅಥವಾ<br>(ಆ) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಯಿಂದ ಬಿಡುಗಡೆಯಾದ ಅಥವಾ ವ್ಯಕ್ತಿಯಹಿಡಿತಕ್ಕೂ ಮೀರಿದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಅಂತಹ ಸೇವೆಯಲ್ಲಿ ಬಿಡುಗಡೆಯಾದವನು<br>ಅಥವಾ<br>(ಇ) ಸ್ವಂತ ಕೋರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ<br>ಅಥವಾ<br>(ಈ) ತನ್ನ ಸ್ವಂತ ಕೋರಿಕೆಯ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ, ನಿರ್ದಿಷ್ಟ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆ ಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆಯುತ್ತಿರುವ ವ್ಯಕ್ತಿ ಮತ್ತು ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿಯವರು.<br>(i) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.<br>(ii) ಮಿಲಿಟರಿ ಸೇವೆಯಿಂದಾಗಿ ಉಂಟಾದ ದೈಹಿಕ ಅಸಾಮರ್ಥ್ಯ ಹೊಂದಿ ಬಿಡುಗಡೆಯಾದ ವ್ಯಕ್ತಿ.<br>(iii) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರು<br>ವಿವರಣೆ :- ಕೇಂದ್ರ ಸಶಸ್ತ್ರ ಶಸ್ತ್ರದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗದಡಿ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದೆ. ಆದರೆ ಸಮವಸ್ತ್ರವನ್ನು ತ್ಯಜಿಸಲು ಅನುಮತಿ |

| | |
|---|---|
| | ನೀಡುವವರೆಗೆ ರಾಜ್ಯ ನಾಗರೀಕ ಸೇವೆ ಅಥವಾ ಹುದ್ದೆಗಳಿಗೆ ನೇಮಕ ಹೊಂದುವಂತಿಲ್ಲ. ಸೈನಿಕರ ಸೇವಾ ಒಪ್ಪಂದದ ಮುಕ್ತಾಯಕ್ಕೆ ಮುನ್ನ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಅವರ ಮೇಲಾಧಿಕಾರಿಗಳಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದು ಅದರ ಮೂಲ ಪ್ರತಿಯನ್ನು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. |
| | 2) ಕೇಂದ್ರ ಸಶಸ್ತ್ರ ದಳಗಳಲ್ಲಿ ಸೇವೆ ಸಲ್ಲಿಸುವಾಗ ಯುದ್ಧ/ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಅಂಗವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಹೆಂಡತಿ ಅಥವಾ ಗಂಡ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಾಗಿರುತ್ತಾರೆ. ಆದರೆ ಅಂತಹವರುಗಳಿಗೆ ವಯೋಮಿತಿ ಸಡಿಲಿಕೆಯನ್ನು ನೀಡಲಾಗುವುದಿಲ್ಲ. |
| | 3) ಸೇನೆಯಿಂದ ಬಿಡುಗಡೆಯಾದ ವ್ಯಕ್ತಿಗಳು ಅವರ ಬಿಡುಗಡೆ ಪ್ರಮಾಣ ಪತ್ರವನ್ನು(ಗುರುತಿನ ಚೀಟಿ, ನಿವೃತ್ತಿ ವೇತನ ಸಂದಾಯದ ಪತ್ರ, ಬಿಡುಗಡೆ ಪುಸ್ತಕ ಮತ್ತು ಪದವಿ ಪ್ರಮಾಣ ಪತ್ರ) /ಮಾಜಿ ಸೈನಿಕರ ಅವಲಂಭಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ / ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರ. |
| | 4)ಮಾಜಿ ಸೈನಿಕರ ಅವಲಂಬಿತರು ಮಾಜಿ ಸೈನಿಕರು ಸೇವೆಯಲ್ಲಿದ್ದಾಗ ಯುದ್ಧ / ಯುದ್ಧದಂತಹ ಕಾರ್ಯಾಚರಣೆಯಲ್ಲಿ ಮಡಿದ ಅಥವಾ ಶಾಶ್ವತ ಅಂಗವಿಕಲತೆ ಹೊಂದಿದ ಬಗ್ಗೆ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. |
| (5) ಅಂಗವಿಕಲ ಅಭ್ಯರ್ಥಿ | ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 149 ಎಸ್ ಆರ್ ಆರ್ 2020 ದಿನಾಂಕ 25-09-2020 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-`ಎ' ಮತ್ತು `ಬಿ' ಗುಂಪಿನ ಹುದ್ದೆಗಳಿಗೆ ಶೇಕಡ 4 ರಷ್ಟು ಮತ್ತು ಗ್ರೂಪ್-`ಸಿ' ಹುದ್ದೆಗಳಿಗೆ ಶೇಕಡ 5 ರಷ್ಟು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೇನೆನಿ 2005 ದಿನಾಂಕ: 19-11-2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್ಪಿ 2010 ದಿನಾಂಕ:18-02-2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್ಲೋಡ್ ಮಾಡತಕ್ಕದ್ದು ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು (ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). ಇತರೆ ಯಾವುದೇ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು/ಗುರುತಿನ ಚೀಟಿಯ ಪ್ರತಿಗಳನ್ನು ಪರಿಗಣಿಸಲು ಬರುವುದಿಲ್ಲ.<br>ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 272 ಸೇನೆನಿ 2013 ದಿನಾಂಕ:11-02-2021 ರನ್ವಯ ಎದ್ದು ಕಾಣುವ ಅಂಗವಿಕಲತೆ (Benchmark Disabilities) ಅಥವಾ ನಿರ್ದಿಷ್ಟಪಡಿಸಿದ ಅಂಗವಿಕಲತೆ (Specified Disabilities) ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ಸಮಯದಲ್ಲಿ ಅಂಗವಿಕಲತೆಯ ಸಂಬಂಧಿಸಿದ ಮೀಸಲಾತಿಯನ್ನು ಕೋರಿ ಅಂಗವಿಕಲತೆಯ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು ಹಾಗೂ ಇತರೆ ಎದ್ದು ಕಾಣುವ ಅಂಗವಿಕಲತೆಯ ಹೊಂದಿರುವ ಅಭ್ಯರ್ಥಿಗಳು ಪರೀಕ್ಷೆಯನ್ನು ಬರೆಯಲು ಲಿಪಿಕಾರರ ಸಹಾಯ ಬೇಕಿದ್ದಲ್ಲಿ ದೈಹಿಕ ಅಸಮರ್ಥತೆ ಹೊಂದಿರುವ ಬಗ್ಗೆ ವೈದ್ಯಕೀಯ ಮಂಡಳಿಯಿಂದ ಅನುಬಂಧ-1 ರಲ್ಲಿ ಪಡೆದ ಪ್ರಮಾಣ ಪತ್ರವನ್ನು ಅಪ್ ಲೋಡ್ ಮಾಡತಕ್ಕದ್ದು. ತನ್ನದೇ ಆದ ಲಿಪಿಕಾರರ ಸೇವೆಯನ್ನು ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಅನುಬಂಧ-1 ಮತ್ತು ಅನುಬಂಧ-2ರಲ್ಲಿ ಪಡೆದ ಪ್ರಮಾಣ ಪತ್ರಗಳನ್ನು ಅರ್ಜಿಯೊಂದಿಗೆ ಅಪ್ ಲೋಡ್ ಮಾಡತಕ್ಕದ್ದು. ಈ ಸಂಬಂಧ ಅರ್ಜಿ ಸಲ್ಲಿಸುವ ಸಮಯದಲ್ಲಿ ಲಿಪಿಕಾರರ ಅವಶ್ಯಕತೆ ಇರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಅಂಕಣದಲ್ಲಿ ಕಡ್ಡಾಯವಾಗಿ ನಮೂದಿಸತಕ್ಕದ್ದು. ಸ್ಪರ್ಧಾತ್ಮಕ ಪರೀಕ್ಷೆಯ ಪ್ರತಿ ಒಂದು ಗಂಟೆಯ ಪರೀಕ್ಷೆಗೆ ಹೆಚ್ಚುವರಿಯಾಗಿ 20 ನಿಮಿಷಗಳ ಕಾಲಾವಕಾಶವನ್ನು ನೀಡಲಾಗುವುದು. (ಅನುಬಂಧ-1 ಮತ್ತು 2 ರ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). |

| | |
|---|---|
| (6) ಯೋಜನೆಗಳಿಂದ ನಿರಾಶ್ರಿತ ಅಭ್ಯರ್ಥಿ (PDP) | ಗ್ರೂಪ್- ಸಿ ಹುದ್ದೆಗಳಿಗೆ ಸಂಬಂಧಿಸಿದಂತೆ ಸರ್ಕಾರಿ ಆದೇಶ ಸಂಖ್ಯೆ ಸಿಆಸುಇ 23 ಸೇನೆನಿ 99 ದಿನಾಂಕ 23-11-2000 ರನ್ವಯ ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿತ ತಹಶೀಲ್ದಾರ್‌ರವರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. ಈ ಮೀಸಲಾತಿಯು ಸದರಿ ಸರ್ಕಾರಿ ಆದೇಶ ಜಾರಿಯಾದ ದಿನಾಂಕದಿಂದ 20 ವರ್ಷಗಳ ಹಿಂದೆ ನಿರ್ವಸಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಅನ್ವಯವಾಗುವುದಿಲ್ಲ.(ಈ ಪ್ರಮಾಣ ಪತ್ರದ ನಮೂನೆಯನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ). |
| (7) ಸೇವಾ ಪ್ರಮಾಣ ಪತ್ರ | ಸರ್ಕಾರಿ ಸೇವೆಯಲ್ಲಿರುವ ನೌಕರರು ವಯೋಮಿತಿ ಸಡಿಲಿಕೆ ಕೋರಿದ್ದಲ್ಲಿ, ಅಂತಹ ನೌಕರರು ಸೇವಾ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಸಕ್ಷಮ ಪ್ರಾಧಿಕಾರದಿಂದ ಪಡೆದಿಟ್ಟುಕೊಂಡಿರತಕ್ಕದ್ದು. ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಕ್ಕದ್ದು. ತಪ್ಪಿದ್ದಲ್ಲಿ ಈ ಸೌಲಭ್ಯವು ದೊರೆಯುವುದಿಲ್ಲ. |
| (8) ತೃತೀಯ ಲಿಂಗದ ಅಭ್ಯರ್ಥಿ (Transgender) | ಸರ್ಕಾರದ ಅಧಿಸೂಚನೆ ಸಂಖ್ಯೆ ಸಿಆಸುಇ 179 ಸನೆನಿ 2020 ದಿನಾಂಕ:06-07-2021 ರಲ್ಲಿ ರಾಜ್ಯ ಸಿವಿಲ್ ಸೇವೆಗಳ ಸಮೂಹ-'ಎ', 'ಬಿ', 'ಸಿ' ಮತ್ತು 'ಡಿ 'ಗುಂಪಿನ ಹುದ್ದೆಗಳಿಗೆ ಸಾಮಾನ್ಯ ವರ್ಗ, ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ ಪ್ರತಿಯೊಂದು ಪ್ರವರ್ಗದಿಂದ ಶೇಕಡ 1 (ಒಂದರಷ್ಟು) ರಷ್ಟು ಹುದ್ದೆಗಳನ್ನು ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಾತಿ ಕಲ್ಪಿಸಿದ್ದು, ತೃತೀಯ ಲಿಂಗದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಕೇಂದ್ರ ಅಧಿನಿಯಮ ತೃತೀಯ ಲಿಂಗ ವ್ಯಕ್ತಿಗಳ (ಹಕ್ಕುಗಳ ರಕ್ಷಣೆ) 2019 ರಲ್ಲಿ ನಿಗದಿಪಡಿಸಿರುವಂತೆ ಜಿಲ್ಲಾ ಮ್ಯಾಜಿಸ್ಟ್ರೇಟ್‌ರವರಿಂದ ಪ್ರಮಾಣಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಲಾಗುವುದು. |

## 9 . ಸೂಚನೆಗಳು :-

ಅಭ್ಯರ್ಥಿಗಳು ಅರ್ಜಿ ಸಲ್ಲಿಸುವಾಗ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆಯ ಪ್ರಮಾಣ ಪತ್ರ, ವಯೋಮಿತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರ, ಹಾಗೂ ಮೇಲ್ಕಂಡ ಮೀಸಲಾತಿಗಳನ್ನು ಕೋರುವ ಎಲ್ಲಾ ಅಭ್ಯರ್ಥಿಗಳು ಸಂಬಂಧಿಸಿದ ಪ್ರಮಾಣ ಪತ್ರಗಳನ್ನು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ **ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವಂತೆ ಪಡೆದಿಟ್ಟುಕೊಂಡು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್ಲೋಡ್ ಮಾಡತಕ್ಕದ್ದು.**

| | |
|---|---|
| 1 | ಅಭ್ಯರ್ಥಿಗಳು ತಮಗೆ ಅನ್ವಯಿಸುವ ಮೀಸಲಾತಿಗಳನ್ನು ಆನ್‌ಲೈನ್ ಅರ್ಜಿ ಸಲ್ಲಿಸುವ ಸಮಯದಲ್ಲೇ ಕೋರತಕ್ಕದ್ದು(claim) ಹಾಗೂ ಈ ಸಂಬಂಧ ಸದರಿ ಪ್ರಮಾಣ ಪತ್ರಗಳನ್ನು ತಪ್ಪದೇ ಅಪ್‌ಲೋಡ್ ಮಾಡತಕ್ಕದ್ದು. ಈ ಎರಡೂ ಪ್ರಕ್ರಿಯೆಗಳು ಕಡ್ಡಾಯವಾಗಿದ್ದು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ತಿರಸ್ಕರಿಸಲಾಗುವುದು. ಈ ಸಂಬಂಧತದನಂತರ ಸಲ್ಲಿಸುವ ಯಾವುದೇ ಮನವಿಗಳನ್ನು ಪರಿಗಣಿಸಲಾಗುವುದಿಲ್ಲ. |
| 2 | ಮೀಸಲಾತಿ ಪ್ರಮಾಣ ಪತ್ರಗಳ ನಮೂನೆಗಳನ್ನು ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ. |
| 3 | ಇತರೆ ನಮೂನೆಗಳಲ್ಲಿ ಸಲ್ಲಿಸಲ್ಪಡುವ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು |
| 4 | ಫೋಟೋ ಮತ್ತು ಸಹಿಯನ್ನು/ದಾಖಲೆಗಳನ್ನು ಅಪ್‌ಲೋಡ್ ಮಾಡದೇ ಇರುವ ಅಪೂರ್ಣವಾಗಿರುವ ದಾಖಲೆಗಳನ್ನು ಅಪ್‌ಲೋಡ್ ಮಾಡಿರುವ ಹಾಗೂ ಶುಲ್ಕಸಂದಾಯ ಮಾಡದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. |
| 5 | ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೋ ಪ್ರತಿಯನ್ನು ಡೌನ್ ಲೋಡ್ ಮಾಡಿ ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ. ಆಯೋಗದಿಂದ ಯಾವುದೇ ಕಾರಣಕ್ಕೂ ಅರ್ಜಿಯ ಪ್ರತಿಯನ್ನು ಒದಗಿಸಲಾಗುವುದಿಲ್ಲ. |

| | |
|---|---|
| 6 | ಆಯಾ ಹುದ್ದೆಗಳಿಗೆ ನಿಗದಿಪಡಿಸಿರುವ ವಯೋಮಿತಿ,ವಿದ್ಯಾರ್ಹತೆ, ಮೀಸಲಾತಿ, ಇತ್ಯಾದಿಗಳಿಗನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ. ತಪ್ಪು ಮಾಹಿತಿ ನೀಡಿದಲ್ಲಿ ಅಂತಹ ಅಭ್ಯರ್ಥಿಗಳನ್ನು ಆಯೋಗವು ನಡೆಸುವ ಯಾವುದೇ ನೇಮಕಾತಿ/ಪರೀಕ್ಷೆಗಳಿಂದ 03 ವರ್ಷಕ್ಕೆ ಡಿಬಾರ್ ಮಾಡಲಾಗುವುದು. ಆದುದರಿಂದ, ಅರ್ಜಿ ಸಲ್ಲಿಸುವ ಮುನ್ನ ಅವರು ನೀಡಿರುವ ಎಲ್ಲಾ ಮಾಹಿತಿಯು ಸರಿಯಾಗಿದೆ ಎಂದು ಖಚಿತಪಡಿಸಿಕೊಂಡು ದೃಢೀಕರಣ ನೀಡುವಾಗ ಎಚ್ಚರವಹಿಸಬೇಕು. |

**ಪ್ರಮುಖ ಸೂಚನೆ:**

ಈ ಅಧಿಸೂಚನೆಯು ಜಾರಿಯಾದ ಮೇಲೆ ಈ ಅಧಿಸೂಚನೆಯಲ್ಲಿ ನಮೂದಿಸಿರುವ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಸರ್ಕಾರವು ಯಾವುದೇ ನಿಯಮಗಳು ಮತ್ತು ನಿರ್ದೇಶನಗಳನ್ನು ಜಾರಿ ಮಾಡಿದಲ್ಲಿ/ತಿದ್ದುಪಡಿ ಮಾಡಿದಲ್ಲಿ/ ಪರಿಷ್ಕರಿಸಿದಲ್ಲಿ ಅವುಗಳನ್ನು ನೇಮಕಾತಿ ಪ್ರಕ್ರಿಯೆಯ ಸಮುಚಿತ ಹಂತದಲ್ಲಿ ಸೇರಿಸಿಕೊ ಳ್ಳಲಾಗುವುದು.

10. <u>ಆಯೋಗದೊಡನೆ ಪತ್ರ ವ್ಯವಹಾರ:-</u>

ಆಯೋಗವು ಅಭ್ಯರ್ಥಿಗಳೊಂದಿಗೆ ಯಾವುದೇ ಪತ್ರ ವ್ಯವಹಾರವನ್ನು ನಡೆಸುವುದಿಲ್ಲ. ವಿಳಾಸ ಬದಲಾವಣೆ ಇದ್ದಲ್ಲಿ ಅಭ್ಯರ್ಥಿಗಳು ಲಿಖಿತ ಮನವಿಯ ಮೂಲಕ ಆಯೋಗದ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ಆಯೋಗವು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ಆಯೋಗವು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು. ಅಭ್ಯರ್ಥಿಗಳು ಆಯೋಗದೊಡನೆ ಸಂಪರ್ಕಿಸಲೇಬೇಕಾದ ಸಂದರ್ಭದಲ್ಲಿ ತಮ್ಮ ಮನವಿಯಲ್ಲಿ ಕೆಳಕಂಡ ಮಾಹಿತಿಗಳನ್ನು ಒದಗಿಸತಕ್ಕದ್ದು:-

(i) ಹುದ್ದೆಯ / ವಿಷಯದ ಹೆಸರು/ನೋಂದಣಿ ಸಂಖ್ಯೆ

(ii) ಅಭ್ಯರ್ಥಿಯ ಪೂರ್ಣ ಹೆಸರು ಹಾಗೂ ಇ-ಮೇಲ್ ಐಡಿ

(iii) ಅರ್ಜಿಯಲ್ಲಿ ನಮೂದಿಸಿರುವ ಅಂಚೆ ವಿಳಾಸ

11. **ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆಗಳು:-**

| | | |
|---|---|---|
| ಕೇಂದ್ರ ಕಛೇರಿಯ ಮಾಹಿತಿ ಕೇಂದ್ರ | : | 080-30574957/ 30574901 |
| ಪ್ರಾಂತೀಯ ಕಛೇರಿ ಮೈಸೂರು | : | 0821-2545956 |
| ಪ್ರಾಂತೀಯ ಕಛೇರಿ ಬೆಳಗಾವಿ | : | 0831-2475345 |
| ಪ್ರಾಂತೀಯ ಕಛೇರಿ ಕಲಬುರ್ಗಿ | : | 08472-227944 |
| ಪ್ರಾಂತೀಯ ಕಛೇರಿ ಶಿವಮೊಗ್ಗ | : | 08182-228099 |

12. <u>ದುರ್ನಡತೆ:-</u>

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು, ಕಂಡುಬಂದಲ್ಲಿ ಅವನು/ಅವಳು ಸ್ವತ: ಕ್ರಿಮಿನಲ್ ವ್ಯವಹಾರಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ; ಹುದ್ದೆಯ ಸಂದರ್ಶನದಿಂದ /ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಆಯೋಗದ ಆದೇಶದ ಮೇರೆಗೆ

ಸಹಿ/-

ಕಾರ್ಯದರ್ಶಿ

ಕರ್ನಾಟಕ ಲೋಕ ಸೇವಾ ಆಯೋಗ

# ನಮೂನೆಗಳು

## .ನಮೂನೆ - ಡಿ

### (ಪ.ಜಾ / ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

(ನಿಯಮ 3ಎ (2) (3) ನೋಡಿ)ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ ............................................................ ರಾಜ್ಯದ / ಕೇಂದ್ರಾಡಳಿತ ಪ್ರದೇಶದ * ................................. ಜಿಲ್ಲೆಯ / ವಿಭಾಗದ................................................ ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ.............................. ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ ...................................ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಿದೆ.

¨ ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950

¨ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950

¨ ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950

¨ ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬು ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲ ತಿದ್ದುಪಡಿಯಾದಂತೆ)

¨ ಸಂವಿಧಾನ

¨ ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956

¨ ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.

¨ ಸಂವಿಧಾನ (ದಾದರ್ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962

¨ ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964

¨ ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967

¨ ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ/ಬುಡಕಟ್ಟುಗಳ ಆದೇಶ 1988

¨ ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ/ಶ್ರೀಮತಿ/ಕುಮಾರಿ * ............................................................ ಮತ್ತು / ಅಥವಾ ಅವನ* / ಅವಳ* ಕುಟುಂಬವು ..........................................................................................ರಾಜ್ಯ / ಕೇಂದ್ರಾಡಳಿತ ಪ್ರದೇಶದ ................................................................. ಜಿಲ್ಲಾ / ವಿಭಾಗದ ..........................................ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ..........................................................

ತಹಶೀಲ್ದಾರ್.............................................

ಸ್ಥಳ : ಪದನಾಮ

ದಿನಾಂಕ: ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ *

* ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ: ಇಲ್ಲಿ ಉಪಯೋಗಿಸಿದ 'ಸಾಮಾನ್ಯ ನಿವಾಸಿಗಳು' ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.ಭಾರತ ಸರ್ಕಾರದ ಪತ್ರ ಸಂಖ್ಯೆ: ಬಿಸಿ 12028/2/76-ಎಸ್‌ಸಿಟಿ-1 ಗೃಹ ಮಂತ್ರಾಲಯ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ) ಪತ್ರ ಸಂಖ್ಯೆ:13-2-74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ: 05.08.1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರ ತಕ್ಕದ್ದು. ಅದೇ ರೀತಿಯಲ್ಲಿ ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

**(ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)**

**ನಮೂನೆ - ಇ**

**(ನಿಯಮ 3ಎ (2) (3) ನೋಡಿ)**

**ಹಿಂದುಳಿದ ವರ್ಗಗಳಿಗೆ (ಪ್ರವರ್ಗ-1) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರ**

……………………………………………………………………………………………………………

……………………………………………ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ /

ಶ್ರೀಮತಿ………………………….......................................................

……………………………………………. ……ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ /

ಶ್ರೀಮತಿ.................................................... ……………………………………………………………ಇವರು

ಹಿಂದುಳಿದ ವರ್ಗಗಳ (ಪ್ರವರ್ಗ) ………………………………………ಜಾತಿಯ ………………………………………ಉಪ

ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ :                                                    ತಹಶೀಲ್ದಾರ್

ದಿನಾಂಕ :                                                 ……………..…………………ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ - 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

**ನಮೂನೆ - ಎಫ್**

(ನಿಯಮ 3ಎ (2) (3)ನ್ನು ನೋಡಿ)

**ಹಿಂದುಳಿದ ವರ್ಗಗಳಿಗೆ (2ಎ, 2ಬಿ. 3ಎ, 3ಬಿ) ಸೇರಿದ ಅಭ್ಯರ್ಥಿಗೆ ನೀಡುವ ಆದಾಯ ಮತ್ತು ಜಾತಿ ಪ್ರಮಾಣ ಪತ್ರ**

............................................ ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ ........................................................... ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ / ಶ್ರೀಮತಿ / ಕುಮಾರಿ ............................................... ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು / ಪತ್ನಿ / ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ:ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002 ರಲ್ಲಿ ನಿರ್ದಿಷ್ಟಪಡಿಸಿದ ಮೇಲುಸ್ತರದ (ಕ್ರೀಮಿಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1 ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ರೂ. 43100-83900/-) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು;

ಅಥವಾ

ಆತನ /ಆಕೆಯ ತಂದೆ ತಾಯಿ/ ಪೋಷಕರು /ಪತ್ನಿ /ಪತಿಯ ಆದಾಯವು 8 ಲಕ್ಷ ರೂಪಾಯಿಗಳಿಗಿಂತ ಮೀರುವುದಿಲ್ಲವೆಂದು (ಸರ್ಕಾರದ ಆದೇಶ ಸಂಖ್ಯೆ: ಹಿಂವಕ 304 ಬಿಸಿಎ 2017 ಬೆಂಗಳೂರು, ದಿ: 14-09-2018);ಅಥವಾ ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ / ಆಕೆಯ ತಂದೆ ತಾಯಿ/ ಪೋಷಕರು / ಪತ್ನಿ / ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ / ಆಕೆಯ ತಂದೆ ತಾಯಿ / ಪೋಷಕ / ಪತ್ನಿ / ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 20 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಶ್ರೀ/ಶ್ರೀಮತಿ/ಕುಮಾರಿ...................................................ಇವರು

............................................ ಜಾತಿಗೆ ................................................................. ಸೇರಿದ ಉಪ ಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 225 ಬಿಸಿಎ 2000 ದಿನಾಂಕ: 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ .................................. (2ಎ, 2ಬಿ, 3ಎ, 3ಬಿ) ಕ್ಕೆ ಸೇರಿರುತ್ತಾರೆ ಮತ್ತು ಈ ಕುಟುಂಬದ ವಾರ್ಷಿಕ ಆದಾಯವು ರೂ:(ರೂ: ಮಾತ್ರ) ಎಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರ್

ದಿನಾಂಕ: ........................ತಾಲ್ಲೂಕು

ಕಛೇರಿಯ ಮೊಹರು

## ನಮೂನೆ - 1

### ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

**(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)**

ಇವರಿಗೆ:

ತಹಶೀಲ್ದಾರರು

....................................................ತಾಲ್ಲೂಕು

................................................ ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ...........................................................................................

ಎಂಬುವವರ ಮಗ / ಮಗಳು / ಪತಿ / ಪತ್ನಿ ................................................................... ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾಮೂಲಗಳಿಂದ:

`
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ?
10. ಸಂಪತ್ತು ತೆರಿಗೆ ಪಾವತಿದಾರರೇ?
11. ಮಾರಾಟ ತೆರಿಗೆ ಪಾವತಿದಾರರೇ?

**ಪ್ರಮಾಣೀಕೃತ ಘೋಷಣೆ**

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ / ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ

ದಿನಾಂಕ: (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

**ಪರಿಶೀಲನಾ ಪ್ರಮಾಣ ಪತ್ರ**

1.ಶ್ರೀ/ಶ್ರೀಮತಿ ..................................................................................................... ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ ............................................................ ಎಂಬುವವರು ಕರ್ನಾಟಕ ರಾಜ್ಯದ ..............................ಜಿಲ್ಲೆಯ ವಿಭಾಗ ...................................................... ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ ............................................................... ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ ತಹಶೀಲ್ದಾರ್.

.............................. ತಾಲ್ಲೂಕು,

ಬೆಂಗಳೂರು ಕಛೇರಿಯ ಮೊಹರು

<u>**ಸೂಚನೆ-1 :**</u> ಇದರಲ್ಲಿ ಉಪಯೋಗಿಸಲಾದ 'ಸಾಮಾನ್ಯ ನಿವಾಸಿ' ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

<u>**ಸೂಚನೆ-2:**</u> ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ: 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು

## ನಮೂನೆ – 2

### ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ/ಶ್ರೀಮತಿ ……………………………………………………………………………………ರವರ ಮಗ/ ಮಗಳು/ ಪತಿ/ ಪತ್ನಿ/ಶ್ರೀ/ಶ್ರೀಮತಿ/ಕುಮಾರಿ………………………………………………………………… ಜಿಲ್ಲೆ ………………………ತಾಲ್ಲೂಕು…………………………… ಗ್ರಾಮದಲ್ಲಿ ………………………………… ವಾಸವಾಗಿರುವ ಇವರು ಒಂದನೇ ತರಗತಿಯಿಂದ ……………………………… ತರಗತಿಯವರೆಗೆ …………………………… ಜಿಲ್ಲೆ ……………………………………… ತಾಲ್ಲೂಕು……………………… ಪಟ್ಟಣ…………………… ಶಾಲೆಯಲ್ಲಿ ವ್ಯಾಸಂಗ ಮಾಡಿ ……………… ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

| | |
|---|---|
| ಮೇಲು ರುಜು | ಸಹಿ |
| ಕ್ಷೇತ್ರ ಶಿಕ್ಷಣ ಅಧಿಕಾರಿ | ಮುಖ್ಯೋಪಾಧ್ಯಾಯರ ಸಹಿ |
| ಕಛೇರಿಯ ಮೊಹರು | ಮತ್ತು ಸಂಸ್ಥೆಯ ಮೊಹರು |

ಸ್ಥಳ :
ದಿನಾಂಕ :

### ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ

ಶ್ರೀ/ಶ್ರೀಮತಿ…………………………………………………ರವರ ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ……………………………………………………………… ಜಿಲ್ಲೆ ……………………………………ತಾಲ್ಲೂಕು ……………………………………………ಗ್ರಾಮದಲ್ಲಿ ವಾಸವಾಗಿರುವ ಇವರು ……………………ನೇ ತರಗತಿಂದ …………………………………ನೇ ತರಗತಿಯವರೆಗೆ ……………………………… ಶೈಕ್ಷಣಿಕ ವರ್ಷದಿಂದ ……………………… ಶೈಕ್ಷಣಿಕ ವರ್ಷದವರೆಗೆ ……………………………ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆಂದು ಪ್ರಮಾಣಿಕರಿಸಲಾಗಿದೆ.

ಸ್ಥಳ:
ದಿನಾಂಕ: ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

**ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 44 ಸೇಸೇನಿ 2001 ದಿನಾಂಕ:27.07.2001**

**ನಮೂನೆ-3**

**ಯೋಜನೆಗಳಿಂದ ನಿರ್ವಸಿತರಾದ ಕುಟುಂಬದ ಅಭ್ಯರ್ಥಿ**

ಶ್ರೀ/ಶ್ರೀಮತಿ.............................................................ಎಂಬುವವರ ಮಗ/ ಮಗಳು/ ಪತಿ/ ಪತ್ನಿ ಶ್ರೀ/ಶ್ರೀಮತಿ/ಕುಮಾರಿ............................ಜಿಲ್ಲೆ...................ತಾಲ್ಲೂಕು......................ಗ್ರಾಮದಲ್ಲಿ ..........................ವಾಸವಾಗಿರುವ ಇವರು: ಇವರ ಕುಟುಂಬದವರ ಅವಲಂಬಿತರಾಗಿದ್ದ ಈ ಕೆಳಕಂಡ ಆಸ್ತಿಯನ್ನು .................. ಯೋಜನೆಗಾಗಿ ....................................ಇಸವಿಯಲ್ಲಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಈ ಮೂಲಕ ಪ್ರಮಾಣೀಕರಿಸಿದೆ.

(ಅ) * * ವಾಸಿಸುವ ಮನೆ ಮತ್ತು ತಾವು ಅವಲಂಬಿತರಾಗಿದ್ದ ಅವರ ಕೃಷಿ ಭೂಮಿಯ ಅರ್ಧದಷ್ಟು

(ಆ) * * ಯೋಜನೆಗೆ ಮೊದಲು ಭೂಮಿಯನ್ನು ಹೊಂದಿರದೆ: ಯೋಜನೆಯಿಂದ ತಾವು ವಾಸಿಸುವ ಮನೆ:

(ಇ) * * ತಾವು ಅವಲಂಬಿತರಾಗಿದ್ದ ತಮ್ಮ ಕೃಷಿ ಭೂಮಿಯ ಅರ್ಧದಷ್ಟು ಅಥವಾ ಅದಕ್ಕಿಂತ ಕಡಿಮೆ ಕೃಷಿ ಭೂಮಿ:

(ಈ) * * ಇತರ ಇನ್ನಾವುದೇ ಪ್ರಕರಣದಲ್ಲಿ ಯೋಜನೆಯಿಂದ ನಿರ್ವಸಿತರಾದವರು.

ಸ್ಥಳ : ತಹಶೀಲ್ದಾರ್

ದಿನಾಂಕ ತಾಲ್ಲೂಕು/ಕಛೇರಿಯ ಮೊಹರು

GOVERNMENT OF KARNATAKA

DEPARTMENT OF SAINIK WELFARE AND RESETTLEMENT

Office of the Deputy Director
Department of Sainik Welfare & Resettlement
(Karnataka)

No. Date:

CERTIFICATE

This is to certify that Shri/Smt/Kum....................................................is an applicant for ................................in Karnataka is the spouse/son/daughter of No......................Rank........... Name .......................................................who died/was permanently disabled while in service according to the certificate issued by Defence Authority. He died/was permanently disabled on.....................

Home address of the individual at the time of joining Defense Service as per the records is:

..................................................................

......................................................................

Place: Signature of the Deputy Director

Date: Department of Sainik Welfare & Resettlement

District ....................................

ಕರ್ನಾಟಕ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ: 19.11.2005

## CERTIFICATE FOR THE PERSONS WITH DISABILITIES

This is to certify that Sri / Smt / Kum ………………………………………………… son/ wife / daughter of Shri ……………………………………………..Age ……………… old, male / female, Registration No …………………………… is a case of ……………………….... He / She is physically disabled/visual disabled/speech & hearing disabled and has …………………….. % (……………………percent) permanent (physical impairment visual impairment speech & hearing impairment) in relation to his / her ……………………………

Note :

1. This condition is progressive/non-progressive/likely to improve/not likely to improve. *
2. Re-assessment is not recommended/is recommended after a period of ……………… months/years. *

* Strike out which is not applicable

(Recent Attested Photograph
showing the disability affixed here)

| | | |
|---|---|---|
| Sd/- | Sd/- | Sd/- |
| (Doctor) | (Doctor) | (Doctor) |
| (Seal) | (Seal) | (Seal) |

Countersigned by the
Medical Superintendent CMO/Head
of Hospital (with seal)

Signature / Thumb impressionof the disabled person

Explanation:-As per Notification No. DPAR 50 SRR 2000 dated 03-09-2005 “ Physically Handicapped candidates “ or “ person with disability ” means a person suffering from not less than forty percent of any of the following disabilities :- (1) Blindness (2) Low Vision (3) Hearing impairment (4) Locomotor disability (5) Leprosy cured (6) Mental retardation (7) Mental illness.

(1)Blindness refers to a condition where a person suffers from any of the following conditions, namely:- (a)Total absence of sight; or (b) Visual acuity not exceeding 6/60 or 20/200 (Snellen) in the better eye with correcting lenses; or (c) limitation of the field of vision subtending an angle of 20 degree or worse;(2) Person with low vision means a person with impairment of visual functioning even after treatment or standard refractive correction, but who uses or is potentially capable of using vision for the planning or execution of a task with appropriate assistive device; (3) Hearing impairment means loss of sixty decibels or more in the better ear in the conversational range of frequencies.(4) Locomotor disability means disability of the bones, joints or muscles leading to substantial restriction of the movement of the limbs or any form of cerebral palsy.(5) Leprosy cured:-means any person who has been cured of Leprosy, but is suffering from, (i) Loss of sensation in hands or feet as well as loss of sensation & paresis in the eye & eyelid, but with no manifest deformity;(ii)manifest deformity & paresis but having sufficient mobility in their hands & feet to enable them to engage in normal economic activity; (iii) extreme physical deformity as well as advanced age which prevents him from undertaking any gainful occupation; and the expressesion “ Leprosy cured “ shall be construed accordingly; (6) Mental Retardation:-means a condition of arrested or incomplete development of mind of a person who is specially characterised by sub normality of intelligence; (7) Mental Illness:- means any mental disorder other than mental retardation.

ಅನುಬಂಧ-1

(ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ 272ಸೇನೆನಿ2013 ದಿನಾಂಕ:11.02.2021ರ ಕಂಡಿಕೆ 5 ರಂತೆ )

(ಅಭ್ಯರ್ಥಿಯು ಬರೆಯಲು ದೈಹಿಕ ಅಸಮರ್ಥ್ಯತೆ ಹೊಂದಿರುವ ಬಗ್ಗೆ ಪ್ರಮಾಣ ಪತ್ರ)

(ದೃಷ್ಠಿ ಮಾಂದ್ಯತೆ, ಚಲನವಲನ ವೈಕಲ್ಯ (ಎರಡೂ ತೋಳುಗಳ ಪೀಡಿತ ಗೊಂಡಂತಹ-BA )ಮತ್ತು ಮೆದುಳಿನ ಪಾರ್ಶ್ವವಾಯು- ಈ ಎದ್ದುಕಾಣುವ ಅಂಗವೀಕಲತೆಯನ್ನು ಹೊಂದಿರುವ ಅಭ್ಯರ್ಥಿಗಳನ್ನು ಹೊರತುಪಡಿಸಿ)

ಈ ವೈದ್ಯಕೀಯ ಮಂಡಳಿಯು, .....................................(ಅಂಗವೈಕಲ್ಯ ಪ್ರಮಾಣ ಪತ್ರದಲ್ಲಿ ದಾಖಲಿಸಲಾಗಿರುವ ಅಂಗವೈಕಲ್ಯತೆಯ ಸ್ವರೂಪ ಮತ್ತು ಪ್ರತಿಶತ ಪ್ರಮಾಣ) ಅಂಗವೈಕಲ್ಯವನ್ನು ಹೊಂದಿರುವ ಶ್ರೀ/ಶ್ರೀಮತಿ/ಕುಮಾರಿ...........................(ಅಂಗವಿಕಲ ಅಭ್ಯರ್ಥಿಯ ಹೆಸರು) .................................... ಇವರ ಮಗ/ಮಗಳು.................................... (ಗ್ರಾಮ. ತಾಲ್ಲೂಕು, ಜಿಲ್ಲೆ) ಇಲ್ಲಿನ ನಿವಾಸಿ, ಇವರನ್ನು ಪರೀಕ್ಷಿಸಿದ್ದು, ಇವರ ಅಂಗವೈಕಲ್ಯತೆಯು ಇವರ ಬರವಣಿಗೆ ಸಾಮರ್ಥ್ಯವನ್ನು ಕುಂಠಿತಗೊಳಿಸುವ ದೈಹಿಕ ಅಸಮರ್ಥತೆಯಾಗಿದೆ ಎಂದು ಪ್ರಮಾಣೀಕರಿಸುತ್ತದೆ.

(ಸಹಿ)

ಅಧ್ಯಕ್ಷರು ಮತ್ತು ಸದಸ್ಯರು, ವೈದ್ಯಕೀಯ ಮಂಡಳಿ.

ಸ್ಥಳ:

ದಿನಾಂಕ:

<u>ಟಿಪ್ಪಣಿ:</u>

(1) ವೈದ್ಯಕೀಯ ಮಂಡಳಿಯ ಸ್ಥಳ ವಿವರಗಳೊಂದಿಗೆ, ಮಂಡಳಿಯ ಅಧ್ಯಕ್ಷರು ಮತ್ತು ಸದಸ್ಯರ ಹೆಸರು ಮತ್ತು ಹುದ್ದೆಗಳನ್ನು ಸ್ಪಷ್ಟವಾಗಿ ನಮೂದಿಸಬೇಕು.

(2) ಅಭ್ಯರ್ಥಿಯು ಹೊಂದಿರುವ ಅಂಗವೈಕಲ್ಯಕ್ಕೆ ಸಂಬಂಧಿಸಿದ ತಜ್ಞವೈದ್ಯರೊಬ್ಬರು ಆಯಾಯಾ ಮಂಡಳಿಯ ಸದಸ್ಯರಾಗಿರುವುದನ್ನು ಖಚಿತಪಡಿಸಿಕೊಳ್ಳಬೇಕು.

ಅನುಬಂಧ-2

(ಸರ್ಕಾರಿ ಆದೇಶ ಸಂಖ್ಯೆ.ಸಿ ಆ ಸು ಇ 272 ಸೇನೆನಿ 2013 ದಿನಾಂಕ:11-02-2021ರ ಕಂಡಿಕೆ 5 ರಂತೆ)

ತನ್ನದೇಯಾದ ಲಿಪಿಕಾರನ ಸೇವೆಯನ್ನು ಪಡೆಯಲು ಮುಚ್ಚಳಿಕೆ ಪತ್ರ

(ಮುಚ್ಚಳಿಕೆ ಪತ್ರವನ್ನು ಈ ಕೆಳಗೆ ನಮೂದಿಸಿರುವ ನಮೂನೆಯಲ್ಲೇ ಪಡೆಯತಕ್ಕದ್ದು)

ಶ್ರೀ/ಶ್ರೀಮತಿ....................................... ಆದ ನಾನು ............................ (ಅಂಗ ವೈಕಲ್ಯದ ಹೆಸರು) ಅಂಗವೈಕಲ್ಯವನ್ನು ಹೊಂದಿದ್ದು, ......................... (ಪರೀಕ್ಷೆಯ ಹೆಸರು) ಪರೀಕ್ಷೆಗೆ ........................................ ಕ್ರಮ ಸಂಖ್ಯೆಯಲ್ಲಿ ..................................... (ಸ್ಥಳ, ತಾಲ್ಲೂಕು, ಜಿಲ್ಲೆ) ಸ್ಥಳದಲ್ಲಿನ ............................... ಕೇಂದ್ರದಲ್ಲಿ ಹಾಜರಾಗಿದ್ದೇನೆ.ನಾನು ........................................ ವಿದ್ಯಾರ್ಹತೆಯನ್ನು ಹೊಂದಿರುತ್ತೇನೆ.

ಈ ಕೆಳಗೆ ಸಹಿ ಮಾಡಿರುವ ನನಗೆ ಶ್ರೀ/ಶ್ರೀಮತಿ/ಕುಮಾರಿ .............................................(ಲಿಪಿಕಾರನ ಹೆಸರು) ಇವರು ಮೇಲೆ ತಿಳಿಸಲಾದ ಪರೀಕ್ಷೆಯಲ್ಲಿ ಲಿಪಿಕಾರನ ಸೇವೆಯನ್ನು ಒದಗಿಸಿರುತ್ತಾರೆ ಎಂದು ನಾನು ಈ ಮೂಲಕ ತಿಳಿಸುತ್ತೇನೆ.

ಲಿಪಿಕಾರನ ವಿದ್ಯಾರ್ಹತೆಯು ..................................... ಎಂದು ನಾನು ಈ ಮೂಲಕ ದೃಢೀಕರಿಸಿ, ಮುಚ್ಚಳಿಕೆ ನೀಡುತ್ತೇನೆ. ಒಂದು ವೇಳೆ ಲಿಪಿಕಾರನ ವಿದ್ಯಾರ್ಹತೆಯು ಮೇಲೆ ತಿಳಿಸಲಾದ ವಿದ್ಯಾರ್ಹತೆಗಿಂತ ಹೆಚ್ಚಾಗಿರುವುದು ಹಾಗೂ ಸರ್ಕಾರಿ ಆದೇಶ ಸಂಖ್ಯೆ.ಸಿಆಸುಇ 272 ಸೇನೆನಿ 2013, ದಿನಾಂಕ:11-02-2021 ಆದೇಶ ಭಾಗದ ಕಂಡಿಕೆ-04 ಉಪಕಂಡಿಕೆ 07 ರಲ್ಲಿ ನಿಗದಿಪಡಿಸಿರುವುದಕ್ಕೆ ಒಳಪಡದಿರುವುದು ಯಾವುದೇ ಹಂತದಲ್ಲಿ ಕಂಡುಬಂದಲ್ಲಿ, ನಾನು ಈ ಪರೀಕ್ಷೆಯಲ್ಲಿ ಉತ್ತೀರ್ಣವಾದಲ್ಲಿ ಪಡೆಯಬಹುದಾದ ಹುದ್ದೆ ಮತ್ತು ಸಂಬಂಧಿಸಿದ ಎಲ್ಲಾ ಹಕ್ಕುಗಳು ನನ್ನಿಂದ ಮುಟ್ಟುಗೋಲು ಹಾಕಿಕೊಳ್ಳಲ್ಪಡುತ್ತವೆ ಎಂಬುದನ್ನು ಸ್ಪಷ್ಟವಾಗಿ ಅರಿತಿರುತ್ತೇನೆ ಹಾಗೂ ಈ ಷರತ್ತಿಗೆ ಸಂಪೂರ್ಣವಾಗಿ ಬದ್ಧನಾಗಿರುತ್ತೇನೆ.

(ಅಭ್ಯರ್ಥಿಯ ಪ್ರವೇಶ ಪತ್ರದ ಪ್ರತಿ, ಗುರುತಿನ ಚೀಟಿ ಮತ್ತು ವೈದ್ಯಕೀಯ ಪ್ರಮಾಣ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸತಕ್ಕದ್ದು)

ಸ್ಥಳ: (ಅಂಗವಿಕಲ ಅಭ್ಯರ್ಥಿಯ ಸಹಿ)

ದಿನಾಂಕ